# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ | : | 861 |
| ಸದಸ್ಯರ ಹೆಸರು | : | ಶ್ರೀ ಹೆಚ್. ಎಸ್ .ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 20.09.2022 |
| ಉತ್ತರಿಸುವವರು | : | ಮಾನ್ಯ ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖಾ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಮಹಿಳೆಯರು ಮತ್ತು ಮಕ್ಕಳಿಗಾಗಿ ರಾಜ್ಯ ಸರ್ಕಾರ ರೂಪಿಸಿರುವ ಕಾರ್ಯಕ್ರಮಗಳು ಹಾಗೂ ಅವುಗಳ ಅನುಷ್ಠಾನಕ್ಕಾಗಿ ಕೈಗೊಂಡಿರುವ ಕ್ರಮಗಳೇನು; | ವಿವರವನ್ನು ಅನುಬಂಧ- 1 ರಲ್ಲಿ ಲಗತ್ತಿಸಿದೆ. |
| ಆ) | ಈ ಪೈಕಿ ಕೇಂದ್ರ ಸರ್ಕಾರದ ಕಾರ್ಯಕ್ರಮಗಳಾವುವು: ಈ ಕಾರ್ಯಕ್ರಮಗಳ ಪ್ರಕ್ರಿಯೆಗಳು ಯಾವ ಹಂತದಲ್ಲಿವೆ: | ವಿವರವನ್ನು ಅನುಬಂಧ -2 ರಲ್ಲಿ ಲಗತ್ತಿಸಿದೆ |
| ಇ) | ಕಳೆದ ಮೂರು ವರ್ಷಗಳಲ್ಲಿ ಈ ಕಾರ್ಯಕ್ರಮಗಳಿಗಾಗಿ ಒದಗಿಸಲಾದ ಅನುದಾನ ಎಷ್ಟು ಈವರೆಗೆ ಕಾರ್ಯಕ್ರಮಗಳ ಮೂಲಕ ಎಷ್ಟು ಜನರಿಗೆ ಅನುಕೂಲವಾಗಿದೆ ? | ವಿವರವನ್ನು ಅನುಬಂಧ-3 ರಲ್ಲಿ ಲಗತ್ತಿಸಿದೆ. |

ಸಂಖ್ಯೆ: ಮಮಇ 80 ಸ್ವೀಮರ 2022

Halappa

(ಆಚಾರ ಹಾಲಪ್ಪ ಬಸಪ್ಪ)
ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ
ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ
ನಾಗರೀಕರ ಸಬಲೀಕರಣ ಸಚಿವರ

# ಅನುಬಂಧ-1

## ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ

### ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಕಾರ್ಯಕ್ರಮ/ಯೋಜನೆಗಳ ವಿವರ (ರಾಜ್ಯ ಸರ್ಕಾರದ ಕಾರ್ಯಕ್ರಮಗಳು)

| ಕ್ರ. ಸಂ. | ಕಾರ್ಯಕ್ರಮ/ ಯೋಜನೆಗಳು | ಕೇಂದ್ರ/ ರಾಜ್ಯ | ಕಾರ್ಯಕ್ರಮಗಳ ವಿವರ |
|---|---|---|---|
| 1 | ಅಂಗನವಾಡಿ ಕಟ್ಟಡಗಳ ನಿರ್ಮಾಣ (ಆರ್‌ಐಡಿಎಫ್-ನಬಾರ್ಡ್) | (ನಬಾರ್ಡ್: ರಾಜ್ಯ-85:15%) | ಅಂಗನವಾಡಿ ಕೇಂದ್ರ ನಡೆಸಲು ಕಟ್ಟಡದ ತೀವ್ರ ಅವಶ್ಯಕತೆಯನ್ನು ಮನಗಂಡು ನಬಾರ್ಡ್ ಸಂಸ್ಥೆಯು ಕಟ್ಟಡ ಕಟ್ಟಲು ಸಾಲದ ರೂಪದಲ್ಲಿ ಆರ್ಥಿಕ ನೆರವನ್ನು ನೀಡುತ್ತಿದೆ. ನಬಾರ್ಡ್ ಸಂಸ್ಥೆಯು ಶೇಕಡ 85 ರಷ್ಟು ಪಾಲನ್ನು ಕಟ್ಟಡ ನಿರ್ಮಾಣಕ್ಕಾಗಿ ನೀಡುತ್ತದೆ ಹಾಗೂ ಉಳಿದ ಶೇಕಡ 15 ರಷ್ಟನ್ನು ರಾಜ್ಯ ಸರ್ಕಾರವು ನೀಡುತ್ತದೆ. |
| 2 | ಅಂಗನವಾಡಿ ಕಟ್ಟಡಗಳ ನಿರ್ಮಾಣ (ಐ.ಸಿ.ಡಿ.ಎಸ್. - ನರೇಗ) | (ನರೇಗ:ರಾಜ್ಯ-50:50%) | ಅಂಗನವಾಡಿ ಕೇಂದ್ರಗಳ ನಿರ್ಮಾಣಕ್ಕಾಗಿ ನರೇಗಾ ಸಹಯೋಗದೊಂದಿಗೆ ಪ್ರತಿ ಕಟ್ಟಡಕ್ಕೆ ರೂ.10.00 ಲಕ್ಷ ಘಟಕ (ನರೇಗಾದ ಪಾಲು ರೂ.5.00 ಲಕ್ಷ, ರಾಜ್ಯದ ಪಾಲು ರೂ. 5.00 ಲಕ್ಷ) ಕಟ್ಟಡ ಕಾಮಗಾರಿಗಳನ್ನು ಕೈಗೊಳ್ಳಲಾಗುವುದು. |
| 3 | ಸಾಂತ್ವನ ಯೋಜನೆ | (ರಾಜ್ಯ-100%) | ಸಮಾಜದಲ್ಲಿ ವರದಕ್ಷಿಣೆ ಕಿರುಕುಳ, ಲೈಂಗಿಕ ಕಿರುಕುಳ, ಕೌಟುಂಬಿಕ ದೌರ್ಜನ್ಯ, ಅತ್ಯಾಚಾರಕ್ಕೊಳಗಾದ ಮಹಿಳೆಯರಿಗೆ ಕಾನೂನು ನೆರವು, ತಾತ್ಕಾಲಿಕ ಆಶ್ರಯ, ಸಾಮಾಜಿಕವಾಗಿ ಹಾಗೂ ಆರ್ಥಿಕವಾಗಿ ಸಶಕ್ತರನ್ನಾಗಿಸುವ ಗುರಿ ಹೊಂದಿದೆ. ಪ್ರಸ್ತುತ 178 ಸಾಂತ್ವನ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. |
| 4 | ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ | (ರಾಜ್ಯ-100%) | ಪ್ರತಿ ವರ್ಷ ಮಾರ್ಚ್ 8 ರಂದು ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ರಾಜ್ಯ ಹಾಗೂ ಜಿಲ್ಲಾ ಮಟ್ಟದಲ್ಲಿ ಆಚರಿಸಲಾಗುತ್ತಿದೆ. ಇಲಾಖೆಯು ಹಾಗೂ ಸ್ವಯಂ ಸೇವಾ ಸಂಸ್ಥೆಗಳು ಏರ್ಪಡಿಸುವ ಕಾರ್ಯಕ್ರಮಗಳಲ್ಲಿ ಮಹಿಳೆಯರ ಅಬಿವೃದ್ಧಿಗೆ ಸಂಬಂದಿಸಿದ ಹಾಗೂ ಸಬಲೀಕರಣಗೊಳಿಸುವ ವಿಷಯಗಳ ಬಗ್ಗೆ ಹೆಚ್ಚು ಒತ್ತು ನೀಡಲಾಗುತ್ತಿದೆ. ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಸಂದರ್ಭದಲ್ಲಿ ಮಹಿಳೆಯರ ಅಭಿವೃದ್ಧಿಗಾಗಿ ಐದು ವರ್ಷಗಳ ಕಾಲ ಸತತವಾಗಿ ಕಾರ್ಯೋನ್ಮುಖ -ವಾಗಿರುವ ಸ್ವಯಂ ಸೇವಾ ಸಂಸ್ಥೆಗಳಿಗೆ ಮತ್ತು ವ್ಯಕ್ತಿಗಳಿಗೆ ಒಟ್ಟು ೨೬ ಕಿತ್ತೂರು ರಾಣಿ ಚೆನ್ನಮ್ಮ ಪ್ರಶಸ್ತಿಗಳನ್ನು ನೀಡುವ ಬಗ್ಗೆ ಪತ್ರಿಕೆಯಲ್ಲಿ ಪ್ರಕಟಿಸಲಾಗುವುದು. |
| 5 | ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆ 2005 ನಿಯಮ 2006 | (ರಾಜ್ಯ-100%) | ಕುಟುಂಬದಲ್ಲಿ ಮಹಿಳೆಯರ ಮೇಲೆ ದೌರ್ಜನ್ಯ ಉಂಟಾದಾಗ, ನ್ಯಾಯಾಲಯದ ಮುಖಾಂತರ ಮಹಿಳೆಯರಿಗೆ ಆರ್ಥಿಕ ಪರಿಹಾರ, ರಕ್ಷಣಾ ಆದೇಶ, ವಾಸದ ಆದೇಶ, ಮಕ್ಕಳ ವಶ, ತಾತ್ಕಾಲಿಕ ಆಶ್ರಯ, ವೈದ್ಯಕೀಯ ಹಾಗೂ ಕಾನೂನು ನೆರವನ್ನು ಒದಗಿಸಲು ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆ 2005 ಹಾಗೂ ನಿಯಮ 2006 ನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಪ್ರಸ್ತುತ 47 ತಾಲ್ಲೂಕುಗಳಲ್ಲಿ ಮಾತ್ರ ಪ್ರತ್ಯೇಕ ಸಂರಕ್ಷಣಾಧಿಕಾರಿಗಳು ಕಾರ್ಯನಿರ್ವಹಿಸುತ್ತಿದ್ದು, ಉಳಿದ ತಾಲ್ಲೂಕುಗಳಲ್ಲಿ ಶಿಶುಅಭಿವೃದ್ಧಿ ಯೋಜನಾಧಿಕಾರಿಗಳೇ ಸಂರಕ್ಷಣಾಧಿಕಾರಿಗಳಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಜಿಲ್ಲಾ ಮಟ್ಟದಲ್ಲಿ 30 ಜಿಲ್ಲೆಗಳ ಉಪನಿರ್ದೇಶಕರು ಸಂರಕ್ಷಣಾಧಿಕಾರಿಗಳಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. |
| 6 | ಭಾಗ್ಯಲಕ್ಷ್ಮಿ ಯೋಜನೆ | (ರಾಜ್ಯ-100%) | ಭಾಗ್ಯಲಕ್ಷ್ಮಿ ಯೋಜನೆಯಡಿ ನೋಂದಣಿಯಾದ ಫಲಾನುಭವಿಗಳಿಗೆ ಭಾಗ್ಯಲಕ್ಷ್ಮಿ ಬಾಂಡ್/ಪಾಸ್ ಬುಕ್ ಗಳನ್ನು ವಿತರಿಸಲಾಗಿದೆ. |
| 7 | ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ತಡೆಗಟ್ಟುವಿಕೆ | (ರಾಜ್ಯ-100%) | 1. ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ನಿವಾರಣೆ ವ್ಯವಸ್ಥಿತ ಪಿಡುಗನ್ನು ನಿಯಂತ್ರಿಸಲು ಅರಿವು ಮೂಡಿಸುವ ಕಾರ್ಯಕ್ರಮವಾಗಿರುತ್ತದೆ. ಇದಕ್ಕಾಗಿ, ಕ್ರಮಬದ್ಧ ಕಾರ್ಯವಿಧಾನದ ಮಾರ್ಗಸೂಚಿಗಳನ್ನು ಮುದ್ರಿಸಿ 30 ಜಿಲ್ಲೆಗಳಿಗೆ ರವಾನಿಸಲಾಗಿರುತ್ತದೆ.<br>2. ಈ ಬಗ್ಗೆ ಭಾಗೀದಾರ ಇಲಾಖೆಗಳು ಮತ್ತು ಸ್ವಯಂ ಸೇವಾ ಸಂಸ್ಥೆಗಳಿಗೆ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿರುತ್ತದೆ.<br>3. ದೂರದರ್ಶನ ಮತ್ತು ಆಕಾಶವಾಣಿ ಮೂಲಕ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. |
| 8 | ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಶೌರ್ಯ ಪ್ರಶಸ್ತಿ | (ರಾಜ್ಯ-100%) | 6-18 ವರ್ಷದ ವಯೋಮಿತಿಯೊಳಗಿನ ಮಕ್ಕಳು ತಮ್ಮ ಪ್ರಾಣದ ಹಂಗನ್ನು ತೊರೆದು ಇತರರ ಜೀವ ಉಳಿಸಲು ಶ್ರಮಿಸುವ ಬಾಲಕರನ್ನು ಹೊಯ್ಸಳ ಪ್ರಶಸ್ತಿಗೆ ಮತ್ತು ಬಾಲಕಿಯರನ್ನು ಕೆಳದಿ ಚೆನ್ನಮ್ಮ ಪ್ರಶಸ್ತಿಗೆ ಆಯ್ಕೆ ಮಾಡಿ ಪ್ರಶಸ್ತಿ ಪ್ರದಾನ ಮಾಡಲಾಗುವುದು. ಈ ಪ್ರಶಸ್ತಿಯು ರೂ.10,000/-ಗಳ ನಗದು ಹಾಗೂ ಪ್ರಶಸ್ತಿ ಪತ್ರವನ್ನು ಒಳಗೊಂಡಿರುತ್ತದೆ. |
| 9 | ಮಕ್ಕಳ ದಿನಾಚರಣೆ | (ರಾಜ್ಯ-100%) | ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ನಿರತವಾಗಿರುವ ಕನಿಷ್ಠ 5 ವರ್ಷಗಳ ಕಾಲ ನಿರಂತರವಾಗಿ ಸೇವೆ ಸಲ್ಲಿಸಿದ 4 ಸಂಸ್ಥೆಗಳನ್ನು ಹಾಗೂ 4 ವ್ಯಕ್ತಿಗಳನ್ನು ಸನ್ಮಾನಿಸಲು ರಾಜ್ಯ ಪ್ರಶಸ್ತಿಯನ್ನು ಮಕ್ಕಳ ದಿನಾಚರಣೆಯಂದು ನೀಡಲಾಗುವುದು. |
| 10 | ಜಿಲ್ಲಾ ಶಿಶುಪಾಲನಾ ಕೇಂದ್ರಗಳು | (ರಾಜ್ಯ-100%) | ಜಿಲ್ಲಾ ಕೇಂದ್ರದಲ್ಲಿ ತಲಾ 02 ಪ್ರಮುಖ ಸರ್ಕಾರಿ ಕಛೇರಿಗಳಲ್ಲಿ ಶಿಶುಪಾಲನಾ ಕೇಂದ್ರಗಳನ್ನು ತೆರೆಯುವ ಮೂಲಕ ಉದ್ಯೋಗಿಗಳಿಗೆ ಅನುಕೂಲ ಕಲ್ಪಿಸಲಾಗುವುದು. |

| | | | |
|---|---|---|---|
| 11 | ಸ್ತ್ರೀಶಕ್ತಿ ಯೋಜನೆ | (ರಾಜ್ಯ-100%) | ಸ್ತ್ರೀಶಕ್ತಿ ಯೋಜನೆಯನ್ನು ರಾಜ್ಯದಲ್ಲಿ ಅಕ್ಟೋಬರ್ 2000 ರಿಂದ ಅನುಷ್ಠಾನಗೊಳಿಸಲಾಗುತ್ತಿದೆ. ಮಹಿಳೆಯರನ್ನು ಸ್ತ್ರೀಶಕ್ತಿ ಗುಂಪುಗಳಲ್ಲಿ ಸಂಘಟಿಸುವುದರ ಮೂಲಕ ಆರ್ಥಿಕ ಹಾಗೂ ಸಾಮಾಜಿಕ ಸಶಕ್ತತೆಯನ್ನು ಬೆಳೆಸುವುದು ಯೋಜನೆಯ ಮುಖ್ಯ ಉದ್ದೇಶವಾಗಿದೆ.1.65 ಲಕ್ಷ ಸ್ತ್ರೀಶಕ್ತಿ ಗುಂಪುಗಳನ್ನು ಹಂತ ಹಂತವಾಗಿ ರಚನೆ ಮಾಡಲಾಗಿದೆ. ಸ್ತ್ರೀಶಕ್ತಿ ಯೋಜನೆಯ ಯಶಸ್ವಿ ಅನುಷ್ಠಾನಕ್ಕಾಗಿ ಸ್ತ್ರೀಶಕ್ತಿ ಗುಂಪುಗಳಿಗೆ ಸುತ್ತುನಿಧಿ, ಸ್ತ್ರೀಶಕ್ತಿ ಗುಂಪುಗಳ ಸದಸ್ಯರಿಗೆ ತರಬೇತಿ, ಅಧಿಕ ಉಳಿತಾಯ ಮಾಡಿದ ಗುಂಪುಗಳಿಗೆ ಪ್ರೋತ್ಸಾಹಧನ, ಆದಾಯೋತ್ಪನ್ನ ಚಟುವಟಿಕೆಗಳಲ್ಲಿ ತೊಡಗಿರುವ ಗುಂಪುಗಳಿಗೆ ಪ್ರೋತ್ಸಾಹಧನ, ಸ್ತ್ರೀಶಕ್ತಿ ಗುಂಪುಗಳು ಉತ್ಪಾದಿಸಿದ ವಸ್ತುಗಳಿಗೆ ಜಿಲ್ಲಾ/ವಿಭಾಗೀಯ ಮಟ್ಟದ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳ, ಸ್ತ್ರೀಶಕ್ತಿ ಸಮಾವೇಶ ಮತ್ತು ಅತ್ಯುತ್ತಮ ಸ್ತ್ರೀಶಕ್ತಿ ಗುಂಪು/ಒಕ್ಕೂಟಗಳಿಗೆ ಪ್ರಶಸ್ತಿ, ಸ್ತ್ರೀಶಕ್ತಿ ಗುಂಪಿನ ಮಹಿಳೆಯರ ತರಬೇತಿಗಾಗಿ ತಾಲ್ಲೂಕು/ಜಿಲ್ಲಾ ಮತ್ತು ವಿಭಾಗೀಯ ಮಟ್ಟದಲ್ಲಿ ಸ್ತ್ರೀಶಕ್ತಿ ಭವನಗಳನ್ನು ನಿರ್ಮಿಸಲಾಗಿದೆ. |
| 12 | ಬಾಲ್ಯ ವಿವಾಹ ನಿಷೇಧ ಕೋಶ | (ರಾಜ್ಯ-100%) | ಬಾಲ್ಯ ವಿವಾಹ ನಿಷೇಧ ಕೋಶದಡಿ 2022-23ನೇ ಸಾಲಿನಲ್ಲಿ ಜನರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ದೂರದರ್ಶನ, ಬಸ್ ಬ್ರ್ಯಾಂಡಿಂಗ್, ಯುವ ಮೇಳ, ಐ.ಇ.ಸಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಸದರಿ ಕಾರ್ಯಕ್ರಮವು ಫಲಾನುಭವಿ ಆಧಾರಿತ ಕಾರ್ಯಕ್ರಮವಾಗಿರುವುದಿಲ್ಲ. |
| 13 | ಸ್ವೀಕಾರ ಕೇಂದ್ರ ಹಾಗೂ ರಾಜ್ಯ ಮಹಿಳಾ ನಿಲಯ | (ರಾಜ್ಯ-100%) | ಅನೈತಿಕ ವ್ಯವಹಾರಗಳ (ತಡೆಗಟ್ಟುವ) ಅಧಿನಿಯಮ 1956ರ ಅಡಿಯಲ್ಲಿ ನ್ಯಾಯಾಲಯದಿಂದ ಪ್ರಕರಣವನ್ನು ದಾಖಲಿಸಿ ಕಳುಹಿಸಲ್ಪಟ್ಟ ಮಹಿಳೆಯರಿಗಾಗಿ, ಪಾಲನೆ ಮತ್ತು ರಕ್ಷಣೆ ಅಗತ್ಯವಿರುವ 18 ವರ್ಷ ಮೇಲ್ಪಟ್ಟ ಸ್ವ-ಇಚ್ಛೆಯಿಂದ/ ಸ್ವಯಂ ಸೇವಾ ಸಂಸ್ಥೆಗಳ ಮುಖಾಂತರ/ ಯಾವುದೇ ವ್ಯಕ್ತಿಗಳ ಮುಖಾಂತರ ದಾಖಲಾದ ಮಹಿಳೆಯರ ತಾತ್ಕಾಲಿಕ ಪುನರ್ವಸತಿಗಾಗಿ 4 ಸ್ವೀಕಾರ ಕೇಂದ್ರಗಳು (ಬೆಂಗಳೂರು, ತುಮಕೂರು, ಗದಗ ಹಾಗೂ ಕಾರವಾರ) ಮತ್ತು ದೀರ್ಘಾವಧಿ ಪುನರ್ವಸತಿಗಾಗಿ ರಾಜ್ಯದಲ್ಲಿ 8 ರಾಜ್ಯ ಮಹಿಳಾ ನಿಲಯಗಳು (ಬೆಂಗಳೂರು ನಗರ, ಬಳ್ಳಾರಿ, ದಾವಣಗೆರೆ, ಧಾರವಾಡ, ಕಲಬುರ್ಗಿ, ಮೈಸೂರು, ಶಿವಮೊಗ್ಗ, ಮತ್ತು ಉಡುಪಿ) ಕಾರ್ಯನಿರ್ವಹಿಸುತ್ತಿವೆ. ಈ ಸಂಸ್ಥೆಗಳಲ್ಲಿ ಮಹಿಳೆಯರಿಗೆ ಆಶ್ರಯ, ರಕ್ಷಣೆ, ಪೌಷ್ಠಿಕ ಆಹಾರ, ವೈದ್ಯೋಪಚಾರ, ಕೌಶಲ್ಯಾಭಿವೃದ್ಧಿ ತರಬೇತಿ ಮತ್ತು ವೃತ್ತಿ ತರಬೇತಿ ನೀಡುವುದರ ಮೂಲಕ ಉದ್ಯೋಗಾವಕಾಶ ಮತ್ತು ಸ್ವ-ಉದ್ಯೋಗಾವಕಾಶ ಕಲ್ಪಿಸಲಾಗುತ್ತಿದೆ. |
| 14 | ಬಾಲಕಿಯರ ವಸತಿ ನಿಲಯ | (ರಾಜ್ಯ-100%) | ಗ್ರಾಮಾಂತರ ಹಾಗೂ ಹಿಂದುಳಿದ ಪ್ರದೇಶಗಳ ತಾಲ್ಲೂಕುಗಳ ಹೆಣ್ಣುಮಕ್ಕಳ ವಿದ್ಯಾಭ್ಯಾಸವನ್ನು ಪ್ರೋತ್ಸಾಹಿಸಲು ಹಾಗೂ ಶಾಲೆ ಬಿಡುವುದನ್ನು ತಪ್ಪಿಸಲು ಅನುಕೂಲವಾಗುವಂತೆ 19 ಮೆಟ್ರಿಕ್ ಪೂರ್ವ ಮತ್ತು 18 ಮೆಟ್ರಿಕ್ ನಂತರದ ಒಟ್ಟು 37 ಬಾಲಕಿಯರ ವಸತಿ ನಿಲಯಗಳನ್ನು 20 ಜಿಲ್ಲೆಗಳಲ್ಲಿ ಸ್ವಯಂಸೇವಾ ಸಂಸ್ಥೆಗಳ ಮೂಲಕ ನಡೆಸಲಾಗುತ್ತಿದೆ. ವಿದ್ಯಾರ್ಥಿನಿಯರಿಗೆ ಉಚಿತ ವಸತಿ ಮತ್ತು ಭೋಜನ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. |
| 15 | ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರಿಗೆ ತರಬೇತಿ | (ರಾಜ್ಯ-100%) | ಸಮಗ್ರ ಶಿಶು ಅಭಿವೃದ್ಧಿ ಯೋಜನೆಯ ಎಲ್ಲಾ ಹಂತದ ಕರ್ಮಚಾರಿಗಳಿಗೆ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳುವುದು. |
| 16 | ಪೋಷಣ ಅಭಿಯಾನ (ರಾಷ್ಟ್ರೀಯ ಪೌಷ್ಟಿಕಾಂಶ ಅಭಿಯಾನ) | (ರಾಜ್ಯ-100%) | ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಫಲಾನುಭವಿಗಳ ಗುರಿಯನ್ನಾಧರಿಸಿ ಎಲ್ಲಾ ಪೌಷ್ಠಿಕತೆಯ ಯೋಜನೆಗಳನ್ನು ಒಗ್ಗೂಡಿಸುವ ಯೋಜನೆ ಇದಾಗಿದೆ. ಮುಖ್ಯವಾಗಿ ಮುಂದಿನ 3 ವರ್ಷಗಳಲ್ಲಿ 0-3 ವರ್ಷದ ಮಕ್ಕಳು, ಗರ್ಭಿಣಿಯರು ಮತ್ತು ಹಾಲುಣಿಸುವ ತಾಯಂದಿರ ಪೌಷ್ಠಿಕತೆಯ ಸ್ಥಿತಿಯನ್ನು ನಿರ್ದಿಷ್ಟ ಅವಧಿಗೆ ಅನುಗುಣವಾಗಿ ಸುಧಾರಿಸುವುದು ಈ ಯೋಜನೆಯ ಮುಖ್ಯವಾದ ಗುರಿಯಾಗಿದೆ. 8ನೇ ಮಾರ್ಚ್ 2018ಕ್ಕೆ ಪ್ರಾರಂಭವಾಗಿರುವ ಈ ಯೋಜನೆಯನ್ನು ವಿವಿಧ ಇಲಾಖೆಗಳ ನಡುವೆ ಸಮನ್ವಯತೆ ತರುವ ಮೂಲಕ ಪೌಷ್ಠಿಕತೆ ವಿಷಯದಲ್ಲಿ ಸಮಗ್ರವಾದ ಬದಲಾವಣೆ ದೂರದೃಷ್ಟಿಯನ್ನು ಹೊಂದಲಾಗಿದೆ. ಉದ್ದೇಶಗಳು: 0-6 ವರ್ಷದ ಮಕ್ಕಳಲ್ಲಿನ ಕುಂಠಿತ ಬೆಳವಣಿಗೆಯನ್ನು ಕಡಿಮೆಗೊಳಿಸುವುದು. 0-6 ವರ್ಷದ ಮಕ್ಕಳಲ್ಲಿನ ಅಪೌಷ್ಠಿಕತೆಯ (ಕಡಿಮೆ ತೂಕದ ಸರಾಸರಿ ಪ್ರಮಾಣ) ಕಡಿಮೆಗೊಳಿಸವುದು. 6 ತಿಂಗಳಿಂದ 59 ತಿಂಗಳವರೆಗಿನ ಮಕ್ಕಳಲ್ಲಿ ರಕ್ತಹೀನತೆಯ ಪ್ರಮಾಣ ಕಡಿಮೆಗೊಳಿಸುವುದು 15 ರಿಂದ 49 ವಯಸ್ಸಿನ ಮಹಿಳೆಯರು ಮತ್ತು ಹವರ್ಷಕ್ಕೆ ಶೇಕಡಾ 3 ರಂತೆ) ಕಡಿಮೆ ತೂಕದ ಜನನಗಳ ಪ್ರಮಾಣವನ್ನು ಕಡಿಮೆಗೊಳಿಸುವುದು |
| 17 | ಪ್ರಾಯಪೂರ್ವ ಬಾಲಕಿಯರ ಸಬಲೀಕರಣ ರಾಜೀವ್ ಗಾಂಧಿ ಯೋಜನೆ (ಸಬಲ) | (ರಾಜ್ಯ-100%) | ಜೀವನದಲ್ಲಿ ಕಿಶೋರಾವಸ್ಥೆಯು ಮಾನಸಿಕ, ಬೌದ್ಧಿಕ, ಭಾವನಾತ್ಮಕ ಬೆಳವಣಿಗೆಗೆ ಸಂಬಂಧಿಸಿದಂತೆ ಒಂದು ಪ್ರಮುಖ ಅವದಧಿಯಾಗಿದೆ. ಹೆಚ್ಚಿನ ರೀತಿಯಲ್ಲಿ ಸೌಲಭ್ಯ ಒದಗಿಸುವುದಕ್ಕಾಗಿ ಹೊಸ ಚಿಂತನೆಯ ರೂಪದಲ್ಲಿ ಕಿಶೋರಿ ಶಕ್ತಿ ಯೋಜನೆ (KSY) ಹಾಗೂ ಸಬಲ ಯೋಜನೆಗಳನ್ನು ವಿಲೀನಗೊಳಿಸಿ ಕೇಂದ್ರ ಸರ್ಕಾರವು 2018-19 ನೇ ಸಾಲಿಗೆ ಸದರಿ ಯೋಜನೆಯನ್ನು ಪ್ರಾಯಪೂರ್ವ ಬಾಲಕಿಯರ ಯೋಜನೆಯನ್ನಾಗಿ ಹೆಸರಿಸಿ ರಾಜ್ಯದ ೩೦ ಜಿಲ್ಲೆಗಳಲ್ಲಿಯೂ ಅನುಷ್ಠಾನಗೊಳಿಸಲಾಗಿದೆ. ಸದರಿ ಯೋಜನೆಯಡಿ 11-14 ವರ್ಷದ ಶಾಲೆಯಿಂದ ಹೊರಗುಳಿದ ಪ್ರಾಯಪೂರ್ವ ಬಾಲಕಿಯರನ್ನು ಫಲಾನುಭವಿಗಳೆಂದು ಗುರುತಿಸಲಾಗುತ್ತಿದ್ದು, 2020-21ನೇ ಸಾಲಿಗೆ ಜಿಲ್ಲೆಗಳಿಂದ ಪಡೆದ ಮಾಹಿತಿಯಂತೆ 7664 ಫಲಾನುಭವಿಗಳನ್ನು ಗುರುತಿಸಲಾಗಿದೆ. ಈ ಯೋಜನೆಯಡಿ ಪೂರಕ ಪೌಷ್ಠಿಕ ಆಹಾರ ಕಾರ್ಯಕ್ರಮ (SNP) ಹಾಗೂ ಪೌಷ್ಠಿಕೇತರ ಅಂಶ ಕಾರ್ಯಕ್ರಮ (Non-Nutrition Components) ಗಳ ಸೇವೆಯನ್ನು ಪ್ರಾಯಪೂರ್ವ ಬಾಲಕಿಯರಿಗೆ ನೀಡಲಾಗುತ್ತಿದೆ. ಪೂರಕ ಪೌಷ್ಠಿಕ ಆಹಾರ (SNP)ವನ್ನು 11-14 ವರ್ಷದ ಶಾಲೆಯಿಂದ ಹೊರಗೆ ಉಳಿದ ಕಿಶೋರಿಯರಿಗೆ ಸಮಗ್ರ ಶಿಶು ಅಭಿವೃದ್ಧಿ ಯೋಜನೆಯಡಿ ಅಂಗನವಾಡಿ ಕೇಂದ್ರಗಳಲ್ಲಿ ರೂ.950/-ರ ಘಟಕ ವೆಚ್ಚದಲ್ಲಿ ಒದಗಿಸಲು ಕೇಂದ್ರ ಸರ್ಕಾರದ ನಿರ್ದೇಶನವಿರುತ್ತದೆ. ಸದರಿ ಕಾರ್ಯಕ್ರಮಕ್ಕಾಗಿ ಕೇಂದ್ರ ಸರ್ಕಾರದ ಪಾಲು 50% ಹಾಗೂ ರಾಜ್ಯ ಸರ್ಕಾರದ ಪಾಲು 50% ರ ಅನುಪಾತದಲ್ಲಿ ವೆಚ್ಚ ಭರಿಸಲಾಗುತ್ತಿದೆ. ಎಲ್ಲಾ ಪೌಷ್ಠಿಕೇತರ ಅಂಶದಡಿ (Non-Nutrition Components) ಕಿಶೋರಿಯರಿಗೆ ಆರೋಗ್ಯ ತಪಾಸಣೆ, ಪೌಷ್ಠಿಕತೆ ಎಲ್ಲಾ ಮತ್ತು ಆರೋಗ್ಯ ಶಿಕ್ಷಣ,ಕುಟುಂಬ ಕಲ್ಯಾಣ, ಮಕ್ಕಳ ಪಾಲನೆ, ಗೃಹ ನಿರ್ವಹಣೆ, ಸಂತಾನೋತ್ಪತ್ತಿ ಮತ್ತು ಎಲ್ಲಾ ಲೈಂಗಿಕ ಎಲ್ಲಾ ಆರೋಗ್ಯ, ಜೀವನ ಕೌಶಲ್ಯ ಶಿಕ್ಷಣ, ವೃತ್ತಿಪರ/ಕೌಶಲ್ಯ ಅಬಿವೃದ್ಧಿ ತರಬೇತಿಯನ್ನು ನೀಡಲಾಗುತ್ತದೆ. ಸದರಿ ಎಲ್ಲಾ ಕಾರ್ಯಕ್ರಮಕ್ಕಾಗಿ ಕೇಂದ್ರ ಸರ್ಕಾರದ ಪಾಲು 60% ಹಾಗೂ ರಾಜ್ಯ ಸರ್ಕಾರದ ಪಾಲು 40% ರ |

| | | | |
|---|---|---|---|
| | | | ಅನುಪಾತದಲ್ಲಿ ವೆಚ್ಚ ಭರಿಸಲಾಗುತ್ತಿದೆ. 2022-23ನೇ ಸಾಲಿನಿಂದ ಸದರಿ ಯೋಜನೆಯನ್ನು ಕೇಂದ್ರ ಸರ್ಕಾರವು ರಾಜ್ಯದ 2ಜಿಲ್ಲೆಗಳಾದ ರಾಯಚೂರು ಮತ್ತು ಯಾದಗಿರ್ ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲು ನಿರ್ದೇಶಿಸಲಾಗಿದ್ದು, ಸದರಿ ಯೋಜನೆಯ ವ್ಯಾಪ್ತಿಯಲ್ಲಿ 11 ರಿಂದ 18 ವರ್ಷದೊಳಗಿನ ಪ್ರಾಯ ಪೂರ್ವ ಬಾಲಕಿಯರು ಒಳಪಡುತ್ತಾರೆ. |
| 18 | ಸಮಗ್ರ ಶಿಶು ಅಭಿವೃದ್ಧಿ ಯೋಜನೆ (ಜಿಲ್ಲಾ ಘಟಕ) | (ರಾಜ್ಯ-100%) | ಸಮಗ್ರ ಶಿಶು ಅಭಿವೃದ್ಧಿ ಯೋಜನೆ-31 ಜಿಲ್ಲಾ ಘಟಕದ ಅಧಿಕಾರಿ/ಸಿಬ್ಬಂದಿಗಳ ವೇತನ ಭತ್ಯೆ ಹಾಗೂ ಆಡಳಿತ ವೆಚ್ಚ |
| 19 | ಸಮಗ್ರ ಶಿಶು ಅಭಿವೃದ್ಧಿ ಯೋಜನೆ | (ರಾಜ್ಯ-100%) | 204 ಶಿಶು ಅಭಿವೃದ್ಧಿ ಯೋಜನೆಗಳ ಅಧಿಕಾರಿ/ಸಿಬ್ಬಂದಿಗಳ ವೇತನ ಭತ್ಯೆ ಹಾಗೂ ಆಡಳಿತ ವೆಚ್ಚ |
| 20 | ಶಾಲಾ ಪೂರ್ವ ಮಕ್ಕಳ ಊಟದ ಯೋಜನೆ<br>ಪೂರಕ ಪೌಷ್ಠಿಕ ಆಹಾರ (ಕೇಂದ್ರ ಪುರಸ್ಕೃತ)<br>ರಾಜ್ಯ ಸರ್ಕಾರದ ಕಾರ್ಯಕ್ರಮಗಳು:-<br>ಸೃಷ್ಠಿ ಯೋಜನೆ, ಕ್ಷೀರಭಾಗ್ಯ ಯೋಜನೆ ಮತ್ತು ಮಾತೃ ಪೂರ್ಣ ಯೋಜನೆ. | (ರಾಜ್ಯ-100%) | ಪೂರಕ ಪೌಷ್ಠಿಕ ಆಹಾರಕ್ಕಾಗಿ ರಾಜ್ಯ ಸರ್ಕಾರ ವೆಚ್ಚ ಮಾಡುವ ಮೊತ್ತದ ಶೇ 50% ಕೇಂದ್ರ ಸರ್ಕಾರವು ಮರುಪಾವತಿಸುತ್ತದೆ. ಫಲಾನುಭವಿಗಳು ಪ್ರತಿ ದಿನ ಮನೆಯಲ್ಲಿ ಸೇವಿಸುವ ಆಹಾರಕ್ಕೆ ಪೂರಕವಾಗಿ ಪರಿಷ್ಕೃತ ಮಾರ್ಗಸೂಚಿಯಂತೆ 6 ತಿಂಗಳಿಂದ - 6 ವರ್ಷದ ಮಕ್ಕಳಿಗೆ 500 ಕ್ಯಾಲೊರಿಗಳನ್ನು, 12-15 ಗ್ರಾಂ ಪ್ರೋಟಿನ್, ಗರ್ಭಿಣಿ/ ಬಾಣಂತಿ/ಪ್ರಾಯಪೂರ್ವ ಬಾಲಕಿಯರಿಗೆ 600 ಕ್ಯಾಲೊರಿಗಳನ್ನು ಮತ್ತು 18-20 ಗ್ರಾಂ ಪ್ರೋಟಿನ್ ಅಲ್ಲದೆ ತೀವ್ರ ಅಪೌಷ್ಠಿಕತೆಯುಳ್ಳ ಮಕ್ಕಳಿಗೆ 800 ಕ್ಯಾಲೊರಿಗಳನ್ನು ಮತ್ತು 20-25 ಗ್ರಾಂ ಪ್ರೋಟಿನ್ ನೀಡುವ ಉದ್ದೇಶದಿಂದ ಯೋಜನೆಯಡಿ ಪೂರಕ ಪೌಷ್ಠಿಕ ಅಹಾರ ನೀಡಲಾಗುತ್ತಿದೆ. ಯೋಜನೆಯ ಮಾರ್ಗಸೂಚಿಯಂತೆ ವರ್ಷದಲ್ಲಿ 300 ದಿನಗಳಿಗೆ ಪೂರಕ ಪೌಷ್ಠಿಕ ಆಹಾರ ನೀಡಲಾಗುತ್ತಿದೆ. ಕೇಂದ್ರ ಸರ್ಕಾರದ ದಿನಾಂಕ: 23.11.2017 ರ ಮಾರ್ಗಸೂಚಿಯಲ್ಲಿ ಸಾಮಾನ್ಯ ಮಕ್ಕಳಿಗೆ ಪ್ರತಿ ದಿನ ರೂ. 8.00 /-ರಂತೆ , ಗರ್ಭಿಣಿ/ಬಾಣಂತಿ/ಪ್ರಾಯಪೂರ್ವ ಬಾಲಕಿಯರಿಗೆ ಘಟಕ ವೆಚ್ಚ ರೂ. 9.50/-ರಂತೆ ಮತ್ತು ತೀವ್ರ ಅಪೌಷ್ಠಿಕತೆಯುಳ್ಳ ಮಕ್ಕಳಿಗೆ ರೂ.12.00 /-ರ ಘಟಕ ವೆಚ್ಚವನ್ನು ಪರಿಷ್ಕರಿಸಲಾಗಿದ್ದು, ಪರಿಷ್ಕೃತ ಘಟಕವೆಚ್ಚದಂತೆ ಆಹಾರವನ್ನು ನೀಡಲಾಗುತ್ತಿದೆ. ರಾಜ್ಯದಲ್ಲಿ 137 ಮಹಿಳಾ ಪೂರಕ ಪೌಷ್ಠಿಕ ಆಹಾರ ಉತ್ಪಾದನ ಹಾಗೂ ತರಬೇತಿ ಕೇಂದ್ರಗಳು ಇಲಾಖೆಯ ಸಹಾಯದೊಂದಿಗೆ ಕಾರ್ಯನಿರತವಾಗಿದ್ದು, ಇದರಲ್ಲಿ 22-32 ಮಹಿಳೆಯರು ಕೆಲಸ ನಿರ್ವಹಿಸುತ್ತಿದ್ದಾರೆ. ಇವರುಗಳು ಬಡತನದ ಹಿನ್ನೆಲೆಯಿಂದ ಬಂದವರಾಗಿದ್ದು ವಿಧವೆಯರು, ವಿಕಲಚೇತನರು, ಪರಿತ್ಯಕ್ತ ಮಹಿಳೆಯರು, ಫಲಾನುಭವಿಗಳ ತಾಯಂದಿರು, ಹಾಗೂ ಸ್ತ್ರೀಶಕ್ತಿ ಗುಂಪಿನ ಸದಸ್ಯರು ಆಗಿರುತ್ತಾರೆ. ಈ ಮಹಿಳಾ ಪೂರಕ ಪೌಷ್ಠಿಕ ಆಹಾರ ಉತ್ಪಾದನ ಹಾಗೂ ತರಬೇತಿ ಕೇಂದ್ರಗಳು ತಿನ್ನಲು ಸಿದ್ಧಪಡಿಸಿದ ಆಹಾರ/ಬೇಯಿಸಲು ಸಿದ್ಧವಿರುವ ಆಹಾರ ಪದಾರ್ಥಗಳನ್ನು ವಾರದ 6 ದಿನಗಳು ತಾಲ್ಲೂಕು ಮಟ್ಟದಲ್ಲಿ ಕಾರ್ಯನಿರತ MSPTC ಮಹಿಳಾ ಪೂರಕ ಪೌಷ್ಠಿಕ ಕೇಂದ್ರಗಳ ಮೂಲಕ ಅಂಗನವಾಡಿ ಕೇಂದ್ರಗಳಿಗೆ ಸರಬರಾಜು ಮಾಡಲಾಗುತ್ತಿದೆ. ಮಾತೃಪೂರ್ಣ: ಗರ್ಭಿಣಿ ಮತ್ತು ಬಾಣಂತಿಯರಿಗೆ ಪೌಷ್ಠಿಕಾಂಶಯುಕ್ತ ಮಧ್ಯಾಹ್ನದ ಬಿಸಿಯೂಟವನ್ನು ಅಂಗನವಾಡಿ ಕೇಂದ್ರದಲ್ಲಿಯೇ ನೀಡುವ "ಮಾತೃಪೂರ್ಣ" ಯೋಜನೆಯನ್ನು 2017 ಅಕ್ಟೋಬರ್ 2ನೇ ತಾರೀಖಿನಿಂದ ರಾಜ್ಯಾದ್ಯಂತ ಅನುಷ್ಠಾನಗೊಳಿಸಲಾಗುತ್ತಿದೆ. ಮಹಿಳೆಯರಿಗೆ ಆಹಾರ ಭದ್ರತೆಯನ್ನು ಒದಗಿಸುವ ಜೊತೆಗೆ ಹೆರಿಗೆ ಸಮಯದಲ್ಲಿನ ಗರ್ಭಿಣಿ ಹಾಗೂ ಶಿಶುಗಳ ಮರಣ ಪ್ರಮಾಣ ಮತ್ತು ಕಡಿಮೆ ತೂಕದ ಮಕ್ಕಳ ಜನನ ನಿಯಂತ್ರಣ ಯೋಜನೆಯ ಉದ್ದೇಶವಾಗಿರುತ್ತದೆ ಕ್ಷೀರಭಾಗ್ಯ ಮತ್ತು ಸೃಷ್ಠಿ ಯೋಜನೆ: ಕ್ಷೀರ ಭಾಗ್ಯ ಯೋಜನೆಯಡಿ 6 ತಿಂಗಳಿನಿಂದ 6 ವರ್ಷದ ಮಕ್ಕಳಿಗೆ ವಾರದಲ್ಲಿ 5 ದಿನ 150ಮಿ.ಲಿ ಹಾಲು ನೀಡಲಾಗುತ್ತಿದೆ (15 ಗ್ರಾಂ ಹಾಲಿನಪುಡಿ , 10 ಗ್ರಾಂ ಸಕ್ಕರೆ). 6 ತಿಂಗಳಿಂದ 3 ವರ್ಷದ ತೀವ್ರ / ಸಾಧಾರಣ ಅಪೌಷ್ಠಿಕ ಮಕ್ಕಳಿಗೆ ವಾರದಲ್ಲಿ 3 ದಿನ ಮೊಟ್ಟೆ, 3-6 ವರ್ಷದ ತೀವ್ರ ಅಪೌಷ್ಠಿಕ ಮಕ್ಕಳಿಗೆ ವಾರದಲ್ಲಿ 5 ದಿನ ಮೊಟ್ಟೆ ನೀಡಲಾಗುತ್ತಿದೆ. ಮೊಟ್ಟೆ ತಿನ್ನದ ಮಕ್ಕಳಿಗೆ ವಾರದ 6 ದಿನ ಹಾಲು ನೀಡಲಾಗುತ್ತಿದೆ. 3-6 ವರ್ಷದ ಎಲ್ಲಾ ಮಕ್ಕಳಿಗೆ ವಾರದಲ್ಲಿ 2 ದಿನ ಮೊಟ್ಟೆ ನೀಡಲಾಗುತ್ತಿದೆ. |
| 21 | ಸಮಗ್ರ ಶಿಶು ಅಭಿವೃದ್ಧಿ ಯೋಜನೆ | (ರಾಜ್ಯ-100%) | ರಾಜ್ಯ ಐ.ಸಿ.ಡಿ.ಎಸ್. ಘಟಕದ ಅಧಿಕಾರಿ ಸಿಬ್ಬಂದಿಗಳ ವೇತನ/ಭತ್ಯೆ, ಕಛೇರಿ ವೆಚ್ಚ ಒಳಗೊಂಡಿರುತ್ತದೆ. |
| 22 | ಅಪೌಷ್ಠಿಕ ಮಕ್ಕಳ ವೈದ್ಯಕೀಯ ವೆಚ್ಚಗಳನ್ನು ಭರಿಸುವ ಬಗ್ಗೆ (ಬಾಲಸಂಜೀವಿನಿ) | (ರಾಜ್ಯ-100%) | ಅಂಗವನಾಡಿ ಕೇಂದ್ರಗಳಲ್ಲಿ ದಾಖಲಾಗುವ ಅಪೌಷ್ಠಿಕ ಮಕ್ಕಳ ವೈದ್ಯಕೀಯ ವೆಚ್ಚಕ್ಕಾಗಿ ಪ್ರತಿ ರೂ. 2000/-ಗಳನ್ನು ನೀಡುವ ಯೋಜನೆಯಾಗಿರುತ್ತದೆ. |
| 23 | ಅಂಗನವಾಡಿಗಳ ನಿರ್ವಹಣೆ | (ರಾಜ್ಯ-100%) | ಅಂಗನವಾಡಿ ಕೇಂದ್ರಗಗಳ ದುರಸ್ತಿ & ನಿರ್ವಹಣೆಗಾಗಿ ಕ್ರಿಯಾಯೋಜನೆಗೆ ಅನುಗುಣವಾಗಿ ವೆಚ್ಚವನ್ನು ಭರಿಸಲಾಗುವುದು. |
| 24 | ನಗರ ಅಂಗನವಾಡಿಗಳ ಮೇಲ್ದರ್ಜೆಕರಣ | (ರಾಜ್ಯ-100%) | ನಗರ ಪ್ರದೇಶಗಳಲ್ಲಿ ಜನ ಸಾಂದ್ರತೆ ಹೆಚ್ಚಾಗಿರುವುದರಿಂದ ಐಸಿಡಿಎಸ್ ವ್ಯಾಪ್ತಿಗೆ ಒಳಪಡದೆ ಇರುವ ಪ್ರದೇಶಗಳಲ್ಲಿರುವ ಎಲ್ಲಾ ಫಲಾನುಭವಿಗಳಿಗೆ ಐಸಿಡಿಎಸ್ ಯೋಜನೆಯ ಸೇವೆಗಳನ್ನು ತಲುಪಿಸುವ ನಿಟ್ಟಿನಲ್ಲಿ ನಗರ ಪ್ರದೇಶಗಳಲ್ಲಿ ಹೆಚ್ಚುವರಿಯಾಗಿ 2017-18ನೇ ಸಾಲಿಗೆ 100 ಕೊಳಗೇರಿ ಅಂಗನವಾಡಿ ಕೇಂದ್ರಗಳು, 2018-19ನೇ ಸಾಲಿನಲ್ಲಿ 250 ನಗರ ಪ್ರದೇಶಗಳಲ್ಲಿ ಹಾಗೂ 2019-20ನೇ ಸಾಲಿಗೆ 100 ನಗರ ಪ್ರದೇಶದ ಅಂಗನವಾಡಿ ಕೇಂದ್ರಗಳನ್ನು ಒಳಗೊಂಡಂತೆ ಒಟ್ಟು 450 ಅಂಗನವಾಡಿ ಕೇಂದ್ರಗಳನ್ನು ಪ್ರಾರಂಭಿಸಲು ರಾಜ್ಯ ಸರ್ಕಾರದಿಂದ ಆಡಳಿತಾತ್ಮಕ ಮಂಜೂರಾತಿ ದೊರೆತಿರುತ್ತದೆ. ಸದರಿ ೪೫೦ ಅಂಗನವಾಡಿ ಕೇಂದ್ರಗಳು ನಗರ ಪ್ರದೇಶಗಳಲ್ಲಿ ಕಾರ್ಯನಿರ್ವಹಿಸುತ್ತಿವೆ. ಸದರಿ ಯೋಜನೆಯಡಿ ಅಂಗನವಾಡಿ ಕೇಂದ್ರಗಳನ್ನು ಶಿಶುಪಾಲನಾ ಕೇಂದ್ರಗಳನ್ನಾಗಿ ಪರಿವರ್ತಿಸಲು ಕ್ರಮವಹಿಸಲಾಗಿದೆ. |
| 25 | ಮಾತೃಶ್ರೀ ಯೋಜನೆ | (ರಾಜ್ಯ-100%) | ಈ ಯೋಜನೆಯಡಿ ಬಿಪಿಎಲ್ ಕುಟುಂಬದ ಗರ್ಭಿಣಿಯರಿಗೆ ಹೆರಿಗೆ ಪೂರ್ವದ ಕಡೆಯ ೩ ತಿಂಗಳು ಹಾಗೂ ಬಾಣಂತಿಯರಿಗೆ ಹೆರಿಗೆ ನಂತರದ 3 ತಿಂಗಳ ಕಾಲ ಮಾಸಿಕ1000/- ರೂ. ಗಳನ್ನು ಅವರ ಆಧಾರ್ ಲಿಂಕ್ಡ್ ಬ್ಯಾಂಕ್ ಖಾತೆಗೆ ವರ್ಗಾಯಿಸುವ ಯೋಜನೆಯಾಗಿರುತ್ತದೆ. |

| | | | |
|---|---|---|---|
| 26 | ಅಂಗನವಾಡಿ ಕಾರ್ಯಕರ್ತೆ/ ಸಹಾಯಕಿಯರ ಮರಣ ಪರಿಹಾರ ನಿಧಿ ಇಡಿಗಂಟು ಯೋಜನೆ | (ರಾಜ್ಯ-100%) | ಅಂಗನವಾಡಿ ಕಾರ್ಯಕರ್ತೆ ಹಾಗು ಸಹಾಯಕಿಯರು ಸಮಗ್ರ ಶಿಶು ಅಭಿವೃದ್ಧಿ ಯೋಜನೆಗಳಲ್ಲಿ ಗೌರವ ಸೇವೆಯ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿದ್ದಾರೆ. ಅಂಗನವಾಡಿ ಕಾರ್ಯಕರ್ತೆಯರು / ಸಹಾಯಕಿಯರು ಸೇವೆಯಲ್ಲಿರುವಾಗ ಮರಣ ಹೊಂದಿದಲ್ಲಿ ಅವರ ಕುಟುಂಬದವರಿಗೆ ಪರಿಹಾರವನ್ನು ಮತ್ತು ತೀವ್ರತರವಾದ ಖಾಯಿಲೆಗಳಿಂದ ನರಳುತ್ತಿದ್ದಲ್ಲಿ ಅವರ ಕುಟುಂಬದ ಕಾನೂನುಬದ್ಧ ವಾರಸುದಾರರಿಗೆ ರೂ.50000/- ನೀಡಲಾಗುತ್ತಿದೆ. ಕನಿಷ್ಠ ಒಂದು ವರ್ಷ ಸೇವೆ ಪೂರೈಸಿರುವ ಕಾರ್ಯಕರ್ತೆಯರು/ಸಹಾಯಕಿಯರು ಈ ಆರ್ಥಿಕ ಸಹಾಯಕ್ಕೆ ಅರ್ಹರಿರುತ್ತಾರೆ. |
| 27 | ಅಂಗನವಾಡಿ ಕಾರ್ಯಕರ್ತೆಯರಿಗೆ ನೂತನ ಪಿಂಚನೆ ವ್ಯವಸ್ಥೆ | (ರಾಜ್ಯ-100%) | ಈ ಯೋಜನೆಯಡಿ 18-55 ವರ್ಷದ ಅಂ.ಕಾರ್ಯಕರ್ತೆ/ಅಂಗನವಾಡಿ ಸಹಾಯಕಿಯರಿಂದ ಕ್ರಮವಾಗಿ ರೂ.150 ಹಾಗೂ ರೂ.84 ಮಾಹೆಯಾನ ವಂತಿಗೆಯಲ್ಲಿ ಪಡೆದು ವಸೂಲಿ ಮಾಡಿ ಅಷ್ಟೇ ಮೊತ್ತದ ವಂತಿಗೆಯನ್ನು ಸರ್ಕಾರ ಭರಿಸುತ್ತದೆ. |
| 28 | ಅಂಗನವಾಡಿ ಕಟ್ಟಡಗಳು ವಿಶೇಷ ಅಭಿವೃದ್ಧಿ ಯೋಜನೆ | (ರಾಜ್ಯ-100%) | ಪ್ರಾದೇಶಿಕ ಅಸಮಾನತೆಯ ಬಗ್ಗೆ ನಂಜುಂಡಪ್ಪ ವರದಿಯಲ್ಲಿ 114 ಹಿಂದುಳಿದ/ಅತಿ ಹಿಂದುಳಿದ/ಅತ್ಯಂತ ಹಿಂದುಳಿದ ತಾಲ್ಲೂಕುಗಳನ್ನು ಗುರುತಿಸಲಾಗಿದೆ. ವಿಶೇಷ ಅಭಿವೃದ್ಧಿ ಕಾರ್ಯಕ್ರಮದಡಿಯಲ್ಲಿ ಈ ತಾಲ್ಲೂಕುಗಳ/ಜಿಲ್ಲೆಗಳಲ್ಲಿ ಅಂಗನವಾಡಿ ಕಟ್ಟಡಗಳ ನಿರ್ಮಾಣಕ್ಕಾಗಿ ಆದ್ಯತೆ ನೀಡಲಾಗುತ್ತಿದೆ. |
| 29 | ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪ ಯೋಜನೆ | (ರಾಜ್ಯ-100%) | ಸದರಿ ಯೋಜನೆಯಡಿ ಕಳೆದ ಸಾಲುಗಳಲ್ಲಿ ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ ಕಾಯ್ದೆ 2013ರಡಿ ಬಳಕೆಯಾಗದೆ ಇರುವ ಮೊತ್ತವನ್ನು ಇಲಾಖೆಯ ಬಂಡವಾಳ ಲೆಕ್ಕ ಶೀರ್ಷಿಕೆಯಡಿ ಒದಗಿಸಲಾಗುವುದು. ಸದರಿ ಅನುದಾನದಲ್ಲಿ ಅನುಮೋದನೆಗೊಂಡ ಕ್ರಿಯಾ ಯೋಜನೆಗೆ ಅನುಗುಣವಾಗಿ ಎಸ್.ಸಿ. ಮತ್ತು ಎಸ್.ಟಿ. ಹೆಚ್ಚಿನ ಜನಸಂಖ್ಯೆ ಇರುವ ಪ್ರದೇಶಗಳಲ್ಲಿ ಅಂಗನವಾಡಿ ಕಟ್ಟಡಗಳ ನಿರ್ಮಿಸಲು ಕ್ರಮವಹಿಸಲಾಗುವುದು. |
| 30 | ಅಂಗನವಾಡಿ ಕಟ್ಟಡ ನಿರ್ವಹಣೆ ಮತ್ತು ದುರಸ್ತಿ | (ರಾಜ್ಯ-100%) | ಜಿಲ್ಲಾ ವಲಯ ತಾಲ್ಲೂಕು ಪಂಚಾಯತ್ ಅಂಗನವಾಡಿ ಕಟ್ಟಡಗಳ ನಿರ್ವಹಣೆ ಯೋಜನೆಯಡಿ ದುರಸ್ತಿ / ನಿರ್ವಹಣೆ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ. |
| 31 | ಅಂಗನವಾಡಿ ಕಟ್ಟಡಗಳ ಉನ್ನತೀಕರಣ | (ರಾಜ್ಯ-100%) | ಅಂಗನವಾಡಿ ಕಟ್ಟಡಗಳ ಉನ್ನತೀಕರಣಕ್ಕಾಗಿ ಕೇಂದ್ರ & ರಾಜ್ಯ ಸರ್ಕಾರದ ಸಹಭಾಗಿತ್ವದಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ. |

# ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ

1. **ಉದ್ಯೋಗಿನಿ ಯೋಜನೆ:-**

ಮಹಿಳೆಯರು ಆದಾಯ ಉತ್ಪನ್ನಕರ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡು ಸ್ವಯಂ ಉದ್ಯೋಗಿಗಳಾಗಲು ಬ್ಯಾಂಕ್ ಮೂಲಕ ಸಾಲ ಮತ್ತು ನಿಗಮದ ಮೂಲಕ ಸಹಾಯಧನವನ್ನು ನೀಡಲಾಗುತ್ತದೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ಸಾಲದ ಘಟಕ ವೆಚ್ಚ ಕನಿಷ್ಟ ರೂ.1.00 ಲಕ್ಷದಿಂದ ಗರಿಷ್ಟ ರೂ.3.00 ಲಕ್ಷಗಳು, ಸಹಾಯಧನದ ಮೊತ್ತ ಶೇಕಡ 50 ರಷ್ಟು, ಗರಿಷ್ಟ ರೂ.1,50,000/- ಗಳನ್ನು ನೀಡಲಾಗುತ್ತದೆ. ಕುಟುಂಬದ ವಾರ್ಷಿಕ ಆದಾಯದ ಗರಿಷ್ಟ ಮಿತಿ ರೂ.2.00 ಲಕ್ಷಗಳಿಗೆ ಮಿತಿಗೊಳಿಸಿದೆ.

ಸಾಮಾನ್ಯ ವರ್ಗ ಮತ್ತು ವಿಶೇಷ ವರ್ಷದ ಮಹಿಳೆಯರಿಗೆ ಯೋಜನಾ ವೆಚ್ಚ ರೂ.1.00 ಲಕ್ಷದಿಂದ ರೂ.3.00 ಲಕ್ಷಗಳವರೆಗೆ, ಶೇ.30ರಷ್ಟು ಅಥವಾ ಗರಿಷ್ಟ ರೂ.90,000/-ಗಳ ಸಹಾಯಧನ ನೀಡಲಾಗುವುದು. ಸಾಮಾನ್ಯ ವರ್ಗದವರ ಕುಟುಂಬದ ವಾರ್ಷಿಕ ಆದಾಯವನ್ನು ಗರಿಷ್ಟ ರೂ.1.50 ಲಕ್ಷಗಳಿಗೆ ಮಿತಿಗೊಳಿಸಿದೆ.ಎಲ್ಲಾ ವರ್ಗದ ಮಹಿಳೆಯರಿಗೆ ವಯೋಮಿತಿ 18 ವರ್ಷ ಮೇಲ್ಪಟ್ಟು ಗರಿಷ್ಠ 55 ವರ್ಷದೊಳಗಿರಬೇಕು.

ಸಾಲ ಮಂಜೂರಾದ ನಂತರ ಸಾಲ ಬಿಡುಗಡೆ ಮುನ್ನ ಈ ಯೋಜನೆಯ ಅರ್ಹ ಫಲಾನುಭವಿಗಳಿಗೆ 3 ರಿಂದ 6 ದಿನಗಳವರೆಗೆ ಉದ್ಯಮಶೀಲತಾ ತರಬೇತಿ ನೀಡಲಾಗುವುದು.ಫಲಾನುಭವಿಗಳ ಆಯ್ಕೆ ಆಯಾ ವಿಧಾನಸಭಾ ಕ್ಷೇತ್ರದ ಮಾನ್ಯ ಶಾಸಕರ ಅಧ್ಯಕ್ಷತೆಯ ಆಯ್ಕೆ ಸಮಿತಿಯಲ್ಲಿ ಆಯ್ಕೆ ಮಾಡಲಾಗುತ್ತದೆ.

2. **ಕಿರುಸಾಲ ಯೋಜನೆ:-**

ಈ ಯೋಜನೆಯಡಿಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ಸ್ತ್ರೀಶಕ್ತಿ ಯೋಜನೆಯಡಿ ರಚನೆಗೊಂಡ ಸ್ತ್ರೀ ಶಕ್ತಿ ಸ್ವ-ಸಹಾಯ ಸಂಘಗಳು ಆರ್ಥಿಕವಾಗಿ ಸಬಲರಾಗಲು ಪ್ರತಿ ಸ್ತ್ರೀಶಕ್ತಿ ಸ್ವ-ಸಹಾಯ ಸಂಘಕ್ಕೆ ನಿಗಮದ ವತಿಯಿಂದ ರೂ.1.00 ಲಕ್ಷದಿಂದ ರೂ. 2.00 ಗಳ ಬಡ್ಡಿ ರಹಿತ ಸಾಲ ಒದಗಿಸುವುದು. 2022-23ನೇ ಸಾಲಿಗೆ ರೂ.300.00 ಲಕ್ಷ ನಿಗಧಿಯಾಗಿರುತ್ತದೆ.

3. **ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆ:-**

ಲಿಂಗತ್ವ ಅಲ್ಪಸಂಖ್ಯಾತರನ್ನು ಆರ್ಥಿಕವಾಗಿ ಸಬಲೀಕರಣಗೊಳಿಸಲು ಆದಾಯೋತ್ಪನ್ನಕರ ಚಟುವಟಿಕೆ ಕೈಗೊಳ್ಳುವ ಉದ್ದೇಶಕ್ಕಾಗಿ ನಿಗಮದಿಂದ ನೇರವಾಗಿ ರೂ.30,000/-ಗಳ ಪ್ರೋತ್ಸಾಹಧನವನ್ನು ಉದ್ಯಮ ಶೀಲತಾ ಅಭಿವೃದ್ಧಿ ತರಬೇತಿಯೊಂದಿಗೆ ನೀಡಲಾಗುವುದು. 2022-23ನೇ ಸಾಲಿಗೆ ರೂ.300.00 ಲಕ್ಷಗಳ ಆಯವ್ಯಯ ನೀಡಲಾಗಿದೆ.

4. **ಚೇತನ ಯೋಜನೆ:-**

ದಮನಿತ ಮಹಿಳೆಯರು (ಮಹಿಳಾ ಲೈಂಗಿಕ ಕಾರ್ಯಕರ್ತೆಯರು) ಆದಾಯೋತ್ಪನ್ನ ಚಟುವಟಿಕೆ ಕೈಗೊಳ್ಳಲು ಅನುವಾಗುವಂತೆ ನಿಗಮದಿಂದ ನೇರವಾಗಿ ರೂ.30,000/-ಗಳ ಪ್ರೋತ್ಸಾಹಧನವನ್ನು ಉದ್ಯಮಶೀಲತಾ ಅಭಿವೃದ್ಧಿ ತರಬೇತಿಯೊಂದಿಗೆ ನೀಡಲಾಗುವುದು. 2022-23ನೇ ಸಾಲಿಗೆ ಈ ಯೋಜನೆಗಾಗಿ ರೂ.200.00 ಲಕ್ಷಗಳನ್ನು ನಿಗಧಿಪಡಿಸಲಾಗಿದೆ.

5. **ಧನಶ್ರೀ :-**

18 ರಿಂದ 60 ವಯೋಮಾನದ ಹೆಚ್.ಐ.ವಿ ಸೋಂಕಿತ ಹಾಗೂ ಬಾಧಿತ ಮಹಿಳೆಯರಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು ನಿಗಮದಿಂದ ನೇರವಾಗಿ ರೂ.30,000/-ಗಳ ಪ್ರೋತ್ಸಾಹಧನವನ್ನು ಉದ್ಯಮಶೀಲತಾ ಅಭಿವೃದ್ಧಿ ತರಬೇತಿಯೊಂದಿಗೆ ನೀಡಲಾಗುವುದು. 2022-23ನೇ ಸಾಲಿಗೆ ರೂ.20000/- ಲಕ್ಷ ನಿಗಧಿಯಾಗಿರುತ್ತದೆ.

6. **ಮಾಜಿ ದೇವದಾಸಿ ಮಹಿಳೆಯರ ಪುನರ್ವಸತಿ ಯೋಜನೆ:-**

ಆರ್ಥಿಕವಾಗಿ ಮಾಜಿ ದೇವದಾಸಿಯರನ್ನು ಸಬಲೀಕರಣಗೊಳಿಸಲು ಆದಾಯೋತ್ಪನ್ನಕರ ಚಟುವಟಿಕೆ ಕೈಗೊಳ್ಳುವ ಉದ್ದೇಶಕ್ಕಾಗಿ ನಿಗಮದಿಂದ 45 ವರ್ಷ ಮೇಲ್ಪಟ್ಟ ಮಾಜಿ ದೇವದಾಸಿ ಮಹಿಳೆಯರಿಗೆ ನೇರವಾಗಿ ಪ್ರೋತ್ಸಾಹಧನ ಮೊತ್ತ ರೂ.30,000/-ಗಳ ಆರ್ಥಿಕ ಸೌಲಭ್ಯವನ್ನು ಇ.ಡಿ.ಪಿ ತರಬೇತಿಯೊಂದಿಗೆ ನೀಡಲಾಗುತ್ತಿದೆ ಹಾಗೂ ದೇವದಾಸಿ ಪದ್ಧತಿಯ ನಿರ್ಮೂಲನೆಗಾಗಿ ಅರಿವು ಮೂಡಿಸುವ ಕಾರ್ಯಕ್ರಮಗಳು, ಕಾನೂನು ಶಿಬಿರ ಹಾಗೂ ಮಾಜಿ ದೇವದಾಸಿ ಮಹಿಳೆಯರಿಗಾಗಿ ಆರೋಗ್ಯ ಶಿಬಿರಗಳನ್ನು ಕೈಗೊಳ್ಳಲಾಗುತ್ತಿದೆ. ಈ ಯೋಜನೆಯಡಿ 2022-23ನೇ ಸಾಲಿಗೆ ರೂ.334.80 ಗಳನ್ನು ನಿಗಧಿಪಡಿಸಲಾಗಿದೆ.

7. **ಮಾಜಿ ದೇವದಾಸಿಯರ ಮಾಸಾಶನ ಯೋಜನೆ:-**

1993-94 ಮತ್ತು 2007-08ರಲ್ಲಿ ನಡೆಸಲಾದ ಸಮೀಕ್ಷೆಯಲ್ಲಿ ಗುರುತಿಸಲಾದ ಮಾಜಿ ದೇವದಾಸಿ ಮಹಿಳೆಯರಿಗೆ ಮಾಸಾಶನ: 45 ವರ್ಷ ಮೀರಿದ ಮಾಜಿ ದೇವದಾಸಿ ಮಹಿಳೆಯರಿಗೆ ಕನಿಷ್ಟ ಜೀವನ ನಡೆಸಲು ಸಹಕಾರಿಯಾಗುವಂತೆ, ಮಾಸಿಕ ಮಾಸಾಶನ ರೂ.1500.00ಗಳನ್ನು DBT ಪೋರ್ಟಾಲ್ ಮೂಲಕ ಸಂಬಂಧಪಟ್ಟ ಮಾಜಿ ದೇವದಾಸಿ ಮಹಿಳೆಯರಿಗೆ ಬ್ಯಾಂಕ್ ಖಾತೆಗೆ ನೇರವಾಗಿ ನೀಡಲಾಗುವುದು.

**8. ಮಾಜಿ ದೇವದಾಸಿಯರಿಗೆ ವಸತಿ ನಿರ್ಮಾಣ ಯೋಜನೆ:-**

ಕರ್ನಾಟಕ ರಾಜ್ಯದ 14 ಜಿಲ್ಲೆಗಳಲ್ಲಿ ನಿವೇಶನ ಹೊಂದಿರುವ ವಸತಿ ರಹಿತ ಮಾಜಿ ದೇವದಾಸಿ ಮಹಿಳೆಯರಿಗೆ ವಸತಿ ಯೋಜನೆಯನ್ನು ರಾಜೀವ್ ಗಾಂಧಿ ಗ್ರಾಮೀಣಾಭಿವೃದ್ಧಿ ವಸತಿ ನಿಗಮದ ಮುಖಾಂತರ ಅನುಷ್ಠಾನಗೊಳಿಸಲಾಗುತ್ತಿದೆ. 2018-19ನೇ ಸಾಲಿನಿಂದ ಗ್ರಾಮೀಣ ಪ್ರದೇಶದಲ್ಲಿ ರೂ.1.75 ಲಕ್ಷ ಹಾಗೂ ನಗರ ಪ್ರದೇಶದಲ್ಲಿ ರೂ.2.00 ಲಕ್ಷ ಘಟಕ ವೆಚ್ಚದಲ್ಲಿ ವಸತಿ ಸೌಲಭ್ಯ ಕಲ್ಪಿಸಲಾಗುತ್ತಿದೆ.

**9. ಬಡ್ಡಿ ಸಹಾಯಧನ ಯೋಜನೆ (ಕರ್ನಾಟಕ ರಾಜ್ಯ ಆರ್ಥಿಕ ಹಣಕಾಸು ನಿಗಮ ಮೂಲಕ)**

ಕರ್ನಾಟಕ ರಾಜ್ಯ ಹಣಕಾಸು ನಿಗಮದ ಮೂಲಕ ಕನಿಷ್ಟ ರೂ.5.00 ಲಕ್ಷದಿಂದ ರೂ.200.00 ಲಕ್ಷಗಳ ಸಾಲವನ್ನು ಹಾಗೂ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದಿಂದ ಶೇ.10ರಷ್ಟು ಬಡ್ಡಿ ಸಹಾಯಧನವನ್ನು ಸಣ್ಣ/ಮಧ್ಯಮ ಕೈಗಾರಿಕೆ ಹಾಗೂ ಸೇವಾ ಘಟಕಗಳನ್ನು ಪ್ರಾರಂಭಿಸಿ ಉದ್ಯೋಗ ಚಟುವಟಿಕೆಗಳಲ್ಲಿ ತೊಡಗುವ ಮಹಿಳಾ ಉದ್ದಿಮೆದಾರರನ್ನು ಪ್ರೋತ್ಸಾಹಿಸುವ ಸಲುವಾಗಿ ನೀಡಲಾಗುತ್ತಿದೆ.

2021-22 ನೇ ಸಾಲಿನ ಆರ್ಥಿಕ ವರ್ಷದಲ್ಲಿ ಆಯವ್ಯಯ ಭಾಷಣ ಕಂಡಿಕೆ ಸಂಖ್ಯೆ 26 ರಲ್ಲಿ ಘೋಷಿಸಿರುವಂತೆ ಮಹಿಳಾ ಉದ್ಯಮಿಗಳನ್ನು ಪ್ರೋತ್ಸಾಹಿಸುವ ಉದ್ದೇಶದಿಂದ ಆಸ್ಪತ್ರೆ, ವೈದ್ಯಕೀಯ ಆರೈಕೆ ಮತ್ತಿತರ ಸೇವಾವಲಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಮಹಿಳಾ ಉದ್ಯಮಿಗಳಿಗೆ, ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ ಮೂಲಕ ರೂ.2.00 ಕೋಟಿಗಳವರೆಗೆ ಶೇಕಡ 4ರ ಬಡ್ಡಿದರದಲ್ಲಿ ಒದಗಿಸಲಾಗುತ್ತದೆ. ಈ ಯೋಜನೆಯಡಿ 2022-23ನೇ ಸಾಲಿಗೆ ರೂ.5000.00 ಲಕ್ಷಗಳ ಅನುದಾನ ನಿಗಧಿಯಾಗಿರುತ್ತದೆ.

**10. ಮಹಿಳಾ ತರಬೇತಿ ಯೋಜನೆ:-**

ಆರ್ಥಿಕವಾಗಿ ಹಿಂದುಳಿದ ಮಹಿಳೆಯರು, ದಮನಿತ ಮಹಿಳೆಯರು ಮತ್ತು ವಿಶೇಷ ವರ್ಗದವರಿಗೆ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಮಹಿಳೆಯರಿಗೆ ಕೌಶಲ್ಯ ತರಬೇತಿ ನೀಡಿ, ಅವರಲ್ಲಿ ಉದ್ಯಮಶೀಲತೆಯನ್ನು ಬೆಳೆಸುವ ಗುರಿಯನ್ನು ಹೊಂದಲಾಗಿದೆ. ತರಬೇತಿಯನ್ನು ಆಯೋಜಿಸಲು ರೂ.50.00 ಲಕ್ಷಗಳನ್ನು ನಿಗಧಿಪಡಿಸಲಾಗಿದೆ.

**11. ಮಾರುಕಟ್ಟೆ ನೆರವು ಯೋಜನೆ:-**

ಮಹಿಳಾ ಉದ್ಯಮಿಗಳು ಮತ್ತು ಮಹಿಳಾ ಸ್ವ-ಸಹಾಯ ಸಂಘಗಳು ತಯಾರಿಸಿದ ಉತ್ಪನ್ನಗಳ ಮಾರಾಟ ಮಾಡಲು ಹಾಗೂ ಉದ್ದಿಮೆದಾರರನ್ನು ಉತ್ತೇಜಿಸುವ ಸಲುವಾಗಿ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಲ್ಲಿ ವಸ್ತುಗಳ ಪ್ರದರ್ಶನ ಮತ್ತು ಮಾರಾಟ ಮೇಳ ಏರ್ಪಡಿಸುವ ಹಾಗೂ ಸಮರ್ಥ ಮಹಿಳಾ ಉದ್ದಿಮೆದಾರರನ್ನು ರಾಜ್ಯ ಮಟ್ಟದಲ್ಲಿ ಏರ್ಪಡಿಸುವ ವಿವಿಧ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳಗಳಲ್ಲಿ ಭಾಗವಹಿಸಲು ಪ್ರೋತ್ಸಾಹಿಸಲಾಗುತ್ತಿದೆ.

**12. ಸಮೃದ್ಧಿ:-**

ನಿಗಮದಿಂದ 2016-17ನೇ ಸಾಲಿನಿಂದ ಬೀದಿಬದಿಯಲ್ಲಿ ಸಣ್ಣ ವ್ಯಾಪಾರ ನಡೆಸುತ್ತಿರುವ ಬಡತನ ರೇಖೆಗಿಂತ ಕೆಳಗಿರುವ 18 ರಿಂದ 60 ವಯೋಮಾನದ ಮಹಿಳೆಯರಿಗೆ "ಸಮೃದ್ಧಿ" ಎಂಬ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ನಗರದ ಮತ್ತು ಗ್ರಾಮೀಣ ಪ್ರದೇಶದ ಬೀದಿಬದಿ ಮಹಿಳಾ ವ್ಯಾಪಾರಿಗಳು ಹೆಚ್ಚಿನ ಬಡ್ಡಿ ನೀಡಿ ಸಾಲ ಪಡೆಯುವುದನ್ನು ತಡೆಗಟ್ಟಿ ಶೋಷಣೆಯಿಂದ ಮುಕ್ತಗೊಳಿಸುವುದು. ಮಹಿಳೆಯರ ನಿರುದ್ಯೋಗ ಸಮಸ್ಯೆಯನ್ನು ನಿವಾರಣೆ ಮಾಡುವುದು ಯೋಜನೆಯ ಮುಖ್ಯ ಉದ್ದೇಶವಾಗಿರುತ್ತದೆ. ಈ ಯೋಜನೆಯಡಿ ಬೀದಿಬದಿ ಮಹಿಳಾ ವ್ಯಾಪಾರಿಗಳಿಗೆ ತಲಾ ರೂ.10,000/- ಗಳಂತೆ ಪ್ರೋತ್ಸಾಹ ಧನ ನೀಡಲಾಗುತ್ತಿದೆ. (2021-22ನೇ ಸಾಲಿನಿಂದ ಸದರಿ ಯೋಜನೆಗೆ ಸರ್ಕಾರದಿಂದ ಆಯವ್ಯಯ ಒದಗಿಸಿರುವುದಿಲ್ಲ.)

**13. ಮಹಿಳೆಯರಿಗೆ ಬಡ್ಡಿ ಸಹಾಯಧನ (ಇಂದಿರಾ ಯೋಜನೆ) ಯೋಜನೆ:-**

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕಾರ್ಯ ದಕ್ಷತೆಯನ್ನು ಹೆಚ್ಚಿಸಲು ಮೇಲ್ವಿಚಾರಕರಿಗೆ ದ್ವಿ-ಚಕ್ರ ವಾಹನ ಖರೀದಿಗಾಗಿ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದಿಂದ ರೂ.50,000/-ಗಳ ಬಡ್ಡಿ ರಹಿತ ಸಾಲವನ್ನು ನೀಡಲಾಗುವುದು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಪ್ರತಿ ಮಾಹೆ ರೂ.1000/-ಗಳನ್ನು ಇಂಧನ ವೆಚ್ಚವಾಗಿ ನೀಡಲಾಗುತ್ತಿದೆ.

**14. ವೃದ್ಧಿ ಯೋಜನೆ:-**

2022-23ನೇ ಸಾಲಿನ ಆಯವ್ಯಯ ಬಾಷಣ ಕಂಡಿಕೆ:142 ರಲ್ಲಿ ಘೋಷಿಸಿರುವಂತೆ "ವ್ಯಾಪಾರ/ಉದ್ಯಮಗಳಲ್ಲಿ ಮಹಿಳೆಯರ ಉಪಸ್ಥಿತಿಯನ್ನು ಹೆಚ್ಚಸಲು KITS (ಕರ್ನಾಟಕ ನಾವೀನ್ಯತೆ ಮತ್ತು ತಂತ್ರಜ್ಞಾನ ಸೊಸೈಟಿ) ರವರು "ಎಲಿವೇಟ್" ಯೋಜನೆಯಡಿ ಗುರುತಿಸಲ್ಪಟ್ಟ ಮಹಿಳಾ ಉದ್ದಿಮೆದಾರರಿಗೆ/ಮಹಿಳಾ ನೇತೃತ್ವದ ಸ್ಟಾರ್ಟ್‌ಅಪ್ ಗಳಿಗೆ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವತಿಯಿಂದ ರೂ.5.00 ರಿಂದ 10.00 ಲಕ್ಷಗಳ ತನಕ ನೇರ ಸಾಲವನ್ನು ಒದಗಿಸಿ "ವೃದ್ಧಿ" ಹೆಸರಿನಡಿ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ.

## ಮಕ್ಕಳ ರಕ್ಷಣಾ ನಿರ್ದೇಶನಾಲಯ

**1) ಮುಖ್ಯಮಂತ್ರಿ ಬಾಲಸೇವಾ ಯೋಜನೆ:**

ಕೋವಿಡ್ -19ರ ಕಾರಣದಿಂದ ತಂದೆ-ತಾಯಿ ಇಬ್ಬರನ್ನು ಕಳೆದುಕೊಂಡ 18 ವರ್ಷದೊಳಗಿನ ಮಕ್ಕಳಿಗೆ ಮಾಹೆಯಾನ ರೂ.3500/-ಗಳನ್ನು ಒದಗಿಸಲು ಮುಖ್ಯಮಂತ್ರಿ ಬಾಲಸೇವಾ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ.

**2) ಬಾಲಹಿತೈಷಿ ಯೋಜನೆ:**

ರಾಜ್ಯದಲ್ಲಿ ಕೋವಿಡ್-19 ನಿಂದ ಇಬ್ಬರು ಅಥವಾ ಏಕ ಪೋಷಕರನ್ನು ಕಳೆದುಕೊಂಡಿರುವ ಮಕ್ಕಳನ್ನು ಮಾನಸಿಕ ಆಘಾತದಿಂದ ಹೊರತರಲು ಮಕ್ಕಳಿಗೆ ನೈತಿಕ, ಭಾವನಾತ್ಮಕ ಹಾಗೂ ಸಾಮಾಜಿಕ ನೆರವನ್ನು ಒದಗಿಸಿ ಮಗುವಿನ ಸರ್ವತೋಮುಖ ಅಭಿವೃದ್ಧಿಗೆ ಬೆಂಬಲ ನೀಡುವ ಸಲುವಾಗಿ ಬಾಲಹಿತೈಷಿ (**ಮಾರ್ಗದರ್ಶಕತ್ವ/ ಮೆಂಟರ್ಶಿಪ್**) ಎಂಬ ಹೊಸ ಯೋಜನೆಯನ್ನು ಪ್ರಾರಂಭಿಸಲಾಗಿದೆ. ಈ ಯೋಜನೆಯಡಿ ಮಕ್ಕಳಿಗೆ ಭಾವನಾತ್ಮಕ, ನೈತಿಕ ಹಾಗೂ ಸಾಮಾಜಿಕ ಬೆಂಬಲವನ್ನು ಒದಗಿಸಲು ಒಬ್ಬ ಮಾರ್ಗದರ್ಶಕರನ್ನು ಮಗುವಿಗೆ ಮಕ್ಕಳ ಕಲ್ಯಾಣ ಸಮಿತಿಯ ಮೂಲಕ ಅನುಸಂಧಾನಿಸುವ ಕಾರ್ಯಕ್ರಮವಾಗಿರುತ್ತದೆ.

**3)ಕೇಂದ್ರ ಸರ್ಕಾರದ"PM CARES for Children" ಯೋಜನೆ:**

ದಿನಾಂಕ: 11.03.2020 ರ ನಂತರದಲ್ಲಿ ಕೋವಿಡ್-19 ರಿಂದ ಪೋಷಕರಿಬ್ಬರನ್ನು ಕಳೆದುಕೊಂಡಂತಹ ಎಲ್ಲಾ ಮಕ್ಕಳಿಗೆ ಕೇಂದ್ರ ಸರ್ಕಾರದ"PM CARES for Children" ಯೋಜನೆಯಡಿಯಲ್ಲಿಯೂ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. ಸದರಿ ಯೋಜನೆಯನ್ನು ಕರ್ನಾಟಕ ರಾಜ್ಯದಲ್ಲಿಯೂ ಅನುಷ್ಠಾನಗೊಳಿಸಲಾಗುತ್ತಿದೆ. ಸದರಿ ಯೋಜನೆಯ ಸೌಲಭ್ಯವನ್ನು ಫಲಾನುಭವಿಗಳಿಗೆ ಒದಗಿಸಲು ಅಂಚೆ ಕಛೇರಿಯಲ್ಲಿ ಖಾತೆಯನ್ನು ತೆರೆಯಬೇಕಾಗಿರುತ್ತದೆ.

**4) ವಿಶೇಷ ಪಾಲನಾ ಯೋಜನೆ:** ರಾಜ್ಯ ಸರ್ಕಾರದ ವತಿಯಿಂದ ಈ ಯೋಜನೆಯು ಅನುಷ್ಠಾನಗೊಳ್ಳುತ್ತಿದೆ ಹೆಚ್.ಐ.ವಿ./ಏಡ್ಸ್ ಸೋಂಕಿತ/ಬಾಧಿತ ಮಕ್ಕಳ ಹಾಗೂ ಏಡ್ಸ್‌ನಿಂದ ಪಾಲಕರನ್ನು ಕಳೆದುಕೊಂಡ ಮಕ್ಕಳಿಗೆ ಪೌಷ್ಠಿಕ ಆಹಾರ, ಸೂಕ್ತ ವೈದ್ಯಕೀಯ ಚಿಕಿತ್ಸೆ ನೀಡುವುದರೊಂದಿಗೆ ಅವರನ್ನು ಶಿಕ್ಷಣದ ಮುಖ್ಯವಾಹಿನಿಯಲ್ಲಿ ತರುವುದು ಈ ಯೋಜನೆಯ ಉದ್ದೇಶ. ಯೋಜನೆಯಡಿಯಲ್ಲಿ ಎ.ಆರ್.ಟಿ. ಕೇಂದ್ರಗಳಲ್ಲಿ ನೋಂದಾಯಿತ ಕುಟುಂಬದ ವಿವರಗಳನ್ನು ಪಡೆದು, ಗೃಹ ಅಧ್ಯಯನ ನಡೆಸಿ, ಒಪ್ಪಿಗೆ ಪತ್ರ ಪಡೆದು ಹೆಚ್.ಐ.ವಿ.ಸೋಂಕಿತ / ಬಾದಿತ ಮಕ್ಕಳಿಗೆ ಆರ್ಥಿಕ ಸಹಾಯವನ್ನು ಪ್ರತಿ ಮಗುವಿಗೆ ಪ್ರತಿ ಮಾಹೆಗೆ ರೂ.1000/-ಗಳಂತೆ (ನೇರವಾಗಿ ಫಲಾನುಭವಿಗಳ ಬ್ಯಾಂಕ್ ಖಾತೆಗಳಿಗೆ) ಒದಗಿಸಲಾಗುತ್ತದೆ. ವೈದ್ಯಕೀಯ, ಪೌಷ್ಠಿಕ ಆಹಾರ, ಶಿಕ್ಷಣ ಮತ್ತು ಇತರೆ ಅವಶ್ಯಕತೆಗಳನ್ನು ಪೂರೈಸಲು ಕುಟುಂಬಗಳಿಗೆ ಪೂರಕವಾಗಿ ಆರ್ಥಿಕ ನೆರವನ್ನು ಮಗುವಿಗೆ 18 ವರ್ಷ ಪೂರ್ಣಗೊಳ್ಳುವವರೆಗೆ ಒದಗಿಸಲಾಗುತ್ತದೆ.

**5) ಪ್ರಾಯೋಜಕತ್ವ ಕಾರ್ಯಕ್ರಮ:** ಕೇಂದ್ರ ಸರ್ಕಾರದ ಮಾರ್ಗಸೂಚಿಯನ್ವಯ ಈ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಕುಟುಂಬದ ವಾತಾವರಣವನ್ನು ಉತ್ತಮಪಡಿಸುವ ಸಲುವಾಗಿ ಮಕ್ಕಳು ದುಡಿಮೆಗೆ ಹೋಗುವುದನ್ನು ತಪ್ಪಿಸಿ ಶಿಕ್ಷಣವನ್ನು ಮುಂದುವರಿಸುವುದನ್ನು ಉತ್ತೇಜಿಸಲು ಹಾಗೂ ವೈದ್ಯಕೀಯ, ಪೌಷ್ಠಿಕ ಆಹಾರ, ವೃತ್ತಿತರಬೇತಿ ಮತ್ತು ಇತರೆ ಅವಶ್ಯಕತೆಗಳನ್ನು ಪೂರೈಸಲು

ಕುಟುಂಬಗಳಿಗೆ ಪೂರಕವಾಗಿ ಆರ್ಥಿಕ ನೆರವನ್ನು ಒದಗಿಸಲಾಗುತ್ತದೆ. ತಿಂಗಳಿಗೆ ರೂ.1000/-ಗಳಂತೆ (ನೇರವಾಗಿ ಫಲಾನುಭವಿಗಳ ಬ್ಯಾಂಕ್ ಖಾತೆಗಳಿಗೆ) ಒಂದು ಕುಟುಂಬದಲ್ಲಿನ ಗರಿಷ್ಠ 2 ಮಕ್ಕಳಿಗೆ ಗರಿಷ್ಠ ಮೂರು ವರ್ಷಗಳ ಅವಧಿಗೆ ಅಥವಾ ಮಗುವಿಗೆ 18 ವರ್ಷ ಪೂರ್ಣಗೊಳ್ಳುವವರೆಗೆ ಯಾವುದು ಮೊದಲೋ ಅಲ್ಲಿಯವರೆಗೆ ಈ ಸೌಲಭ್ಯವನ್ನು ನೀಡಲುಕ್ರಮವಹಿಸಲಾಗುತ್ತಿದೆ.

**6) ದತ್ತು ಕಾರ್ಯಕ್ರಮ:**

ಕೌಟುಂಬಿಕ ವ್ಯವಸ್ಥೆಯಲ್ಲಿ ಬೆಳೆಯುವುದು ಪ್ರತಿಯೊಂದು ಮಗುವಿನ ಹಕ್ಕು. ಮಗುವಿಗೆ ಅವಶ್ಯವಿರುವ ಪ್ರೀತಿ ಮತ್ತು ಆರೈಕೆಯನ್ನು ಕುಟುಂಬದ ವಾತಾವರಣವು ಕಲ್ಪಿಸುತ್ತದೆ. ಈ ನಿಟ್ಟಿನಲ್ಲಿ ದತ್ತು ಪ್ರಕ್ರಿಯೆಯು ಅನಾಥ, ಪರಿತ್ಯಕ್ತ ಹಾಗೂ ನಿರ್ಗತಿಕ ಮಕ್ಕಳ ಪುನರ್ವಸತಿಗೆ ನೆರವಾಗುವ ಒಂದು ಉತ್ತಮ ಕಾರ್ಯಕ್ರಮವಾಗಿದೆ. ಇಂತಹ ಮಕ್ಕಳಿಗೆ ಜೈವಿಕ ಪೋಷಕರನ್ನು ಒದಗಿಸಿಕೊಡುವುದರ ಮೂಲಕ ಶಾಶ್ವತ ಕುಟುಂಬದ ವ್ಯವಸ್ಥೆಯನ್ನು ಕಾನೂನು ಬದ್ಧವಾಗಿ ಕಲ್ಪಿಸಲು ದತ್ತು ಕಾರ್ಯಕ್ರಮ ನೆರವಾಗುತ್ತಿದೆ.

**7)ತೆರೆದ ತಂಗುದಾಣಗಳು:**

ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ, 2015ರ ಸೆಕ್ಷನ್ 47 ರಲ್ಲಿ ನಗರ ಮತ್ತುಅರೆ ನಗರ ಪ್ರದೇಶಗಳಲ್ಲಿ ಕುಟುಂಬದ ಬೆಂಬಲ ಇಲ್ಲದ, ಪಾಲನೆ ಮತ್ತು ರಕ್ಷಣೆಯ ಅಗತ್ಯವುಳ್ಳ ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ಬೆಂಬಲ ಒದಗಿಸುವುದೇ ಈ ಕಾರ್ಯಕ್ರಮದ ಗುರಿಯಾಗಿರುತ್ತದೆ. ಮುಖ್ಯವಾಗಿ ಭಿಕ್ಷಾಟನೆಯಲ್ಲಿ ತೊಡಗಿರುವ ಮಕ್ಕಳು, ಚಿಂದಿ ಆಯುವ ಮಕ್ಕಳು, ಬೀದಿ ಮಕ್ಕಳು, ಕೆಲಸ ಮಾಡುವ ಮಕ್ಕಳು, ಅನಾಥ ಮಕ್ಕಳು, ಸಾಗಾಣಿಯಾದ ಮಕ್ಕಳು, ಪರಿತ್ಯಜಿಸಲ್ಪಟ್ಟ ಮಕ್ಕಳು, ಶೋಷಣೆ, ದೌರ್ಜನ್ಯಕ್ಕೆ ಒಳಗಾದ ಬೀದಿ ಮಕ್ಕಳು ಹಾಗೂ ವಲಸೆ ಬಂದವರ ಮಕ್ಕಳು ಮತ್ತು ರಸ್ತೆ ಬದಿಯಲ್ಲಿ ವಾಸಿಸುವವರ ಮಕ್ಕಳ ಪುನರ್ವಸತಿ ಮಾಡಲಾಗುತ್ತದೆ.

**8) ಬಾಲಕರ ಬಾಲಮಂದಿರಗಳು, ಬಾಲಕಿಯರ ಬಾಲಮಂದಿರಗಳು, ಬುದ್ಧಿಮಾಂದ್ಯ ಬಾಲಕರು ಹಾಗೂ ಬಾಲಕಿಯರಿಗಾಗಿ ಬಾಲಮಂದಿರಗಳು, ಬಾಲಕರ ಅನುಪಾಲನಾ ಗೃಹ, ಶಿಶು ಮಂದಿರ, ವೀಕ್ಷಣಾಲಯ ಮತ್ತು ಪ್ಲೇಸ್‌ಆಫ್ ಸೇಫ್ಟಿ.**

**ಬಾಲಮಂದಿರಗಳು:**

ಮಕ್ಕಳ ಕಲ್ಯಾಣ ಸಮಿತಿಯ ಮುಂದೆ ಬಂದ ಮಕ್ಕಳ ಪ್ರಕರಣಗಳ ವಿಚಾರಣೆ ವೇಳೆಯಲ್ಲಿ ರಕ್ಷಣೆ ಮತ್ತು ಪೋಷಣೆ ಅಗತ್ಯವಿರುವ ಮಕ್ಕಳ ಪಾಲನೆ ಮತ್ತು ರಕ್ಷಣೆಗಾಗಿ ಹಾಗೂ ದೀರ್ಘಾವಧಿ ಪುನರ್ವಸತಿಗಾಗಿ ಬಾಲನ್ಯಾಯ ಕಾಯ್ದೆ 2015 ಸೆಕ್ಷನ್ 50 (1) ರನ್ವಯ ಬಾಲಮಂದಿರಗಳನ್ನು (ಬಾಲಕ/ಬಾಲಕಿಯರ) ಸ್ಥಾಪಿಸಲಾಗಿದೆ.

ಮಕ್ಕಳ ಕಲ್ಯಾಣ ಸಮಿತಿಯ ಮುಂದೆ ಬಂದ ಮಕ್ಕಳನ್ನು ಸಮಿತಿಯ ಆದೇಶದನ್ವಯ ಬಾಲಮಂದಿರಗಳಿಗೆ ದಾಖಲು ಮಾಡಿಕೊಳ್ಳಲಾಗುವುದು. ಈ ರೀತಿ ಅಭಿರಕ್ಷಣೆಗೆ ಒಳಪಟ್ಟ ಮಕ್ಕಳಿಗೆ ಮೂಲಭೂತ ಅವಶ್ಯಕತೆಗಳಾದ ಆಹಾರ, ವಸತಿ, ಆರೋಗ್ಯ ಸೇವೆ ಹಾಗೂ ಮನೋರಂಜನೆಯನ್ನು ಒದಗಿಸುವುದರ ಜೊತೆಗೆ ಪುನರ್ವಸತಿಗೆ ಅಗತ್ಯವಾದ ಶಿಕ್ಷಣ ಹಾಗೂ ತರಬೇತಿಯನ್ನು ಒದಗಿಸಲಾಗುವುದು. ಮಕ್ಕಳನ್ನು ವಿದ್ಯಾಭ್ಯಾಸಕ್ಕಾಗಿ ಸರ್ಕಾರಿ ಅಥವಾ ಖಾಸಗಿ ಶಾಲೆ ಮತ್ತು ಕಾಲೇಜುಗಳಿಗೆ ಕಳುಹಿಸಲಾಗುತ್ತದೆ.

ರಾಜ್ಯದಲ್ಲಿ ಒಟ್ಟು 60 ಬಾಲಮಂದಿರಗಳಿದ್ದು, ಇವುಗಳಲ್ಲಿ 30 ಬಾಲಕರಿಗಾಗಿ ಹಾಗೂ 29 ಬಾಲಕಿಯರಿಗಾಗಿ ಹಾಗೂ ಒಂದು ಶಿಶುಮಂದಿರ 6 ವರ್ಷದೊಳಗಿನ ಮಕ್ಕಳಿಗಾಗಿ (ಗಂಡು ಮತ್ತು ಹೆಣ್ಣು ಮಕ್ಕಳಿಗಾಗಿ) ಹಾಗೂ ಒಂದು ಅನುಪಾಲನಾ ಗೃಹ ಬೆಳಗಾವಿಯಲ್ಲಿ ಕಾರ್ಯನಿರ್ವಹಿಸುತ್ತಿದೆ.

**ಅನುಪಾಲನ ಗೃಹ:**

ಬಾಲಮಂದಿರಗಳಿಂದ 18 ವರ್ಷ ಪೂರ್ಣಗೊಂಡ ಮಕ್ಕಳನ್ನು ಬಿಡುಗಡೆ ಮಾಡಬೇಕಾದ ಸಂದರ್ಭದಲ್ಲಿ, ಮಕ್ಕಳ ಕಲ್ಯಾಣ ಸಮಿತಿಯು ಅಂತಹ ಮಕ್ಕಳಿಗೆ ಸಮಾಜದ ಮುಖ್ಯವಾಹಿನಿಯೊಂದಿಗೆ ಬೆರೆಯಲು ಕಾಲಾವಕಾಶ ಅಗತ್ಯವೆಂದು ಅಭಿಪ್ರಾಯಪಟ್ಟಲ್ಲಿ ಅಥವಾ ಇನ್ನಾವುದೇ ಪ್ರಮುಖ ಕಾರಣದಿಂದ ಮಗುವಿಗೆ ಸಂಸ್ಥೆಯ ನೆರವು ಅಗತ್ಯವಿದ್ದು, ಅಂತಹ ಮಕ್ಕಳಿಗೆ ಅನುಪಾಲನಾ ಸೇವೆಗಾಗಿ ಆದೇಶ ಮಾಡಿದಲ್ಲಿ ಗಂಡು ಮಕ್ಕಳನ್ನು ಪುರುಷ ಅನುಪಾಲನಾ ಗೃಹಗಳಿಗೆ ಹಾಗೂ ಹೆಣ್ಣು ಮಕ್ಕಳನ್ನು ರಾಜ್ಯ ಮಹಿಳಾ ನಿಲಯಗಳಿಗೆ ದಾಖಲೆ ಮಾಡಲಾಗುವುದು.

**9)ವೀಕ್ಷಣಾಲಯ:**

ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ, 2015ರ ಸೆಕ್ಷನ್ 47 ರಲ್ಲಿ ವೀಕ್ಷಣಾಲಯಗಳು ಕಾನೂನಿನೊಡನೆ ಸಂಘರ್ಷಕ್ಕೊಳಪಟ್ಟ ಮಕ್ಕಳು, ಅವರ ವಿರುದ್ಧದ ವಿಚಾರಣೆ ಬಾಕಿ ಇರುವ ಅವಧಿಯಲ್ಲಿ ತಾತ್ಕಾಲಿಕವಾಗಿ ಅಭಿರಕ್ಷಣೆ ಒದಗಿಸುವ ಸಂಸ್ಥೆಗಳಾಗಿರುತ್ತವೆ. ಭಾರತೀಯ ದಂಡ ಸಂಹಿತೆ ಹಾಗೂ ಇತರೆ ಶಾಸನಗಳನ್ವಯ ಕಾನೂನಿನೊಡನೆ ಸಂಘರ್ಷಕ್ಕೊಳಪಟ್ಟ 18 ವರ್ಷದೊಳಗಿನ ಮಕ್ಕಳ ಪ್ರಕರಣಗಳನ್ನು ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ)ಕಾಯ್ದೆ 2015ರ ಸೆಕ್ಷನ್ (4)ರಡಿ ಸ್ಥಾಪಿಸಿರುವ ಬಾಲ ನ್ಯಾಯ ಮಂಡಳಿಯ ಮುಂದೆ ಹಾಜರುಪಡಿಸಲಾಗುವುದು.

**10)ಪ್ಲೇಸ್ ಆಫ್ ಸೇಫ್ಟಿ:**

ಕಾನೂನು ಸಂಘರ್ಷಕ್ಕೊಳಪಟ್ಟು ಗಂಭೀರ ಪ್ರಕರಣಗಳನ್ನು ಎದುರಿಸುತ್ತಿರುವ 16 ರಿಂದ 18 ವರ್ಷದೊಳಗಿನ ಮಕ್ಕಳನ್ನು ವಿಚಾರಣಾ ಪ್ರಕ್ರಿಯೆ ಪೂರ್ಣಗೊಳ್ಳುವ ತನಕ ಮತ್ತು ಅಪರಾಧವೆಸಗಿರುವ ಅಪರಾಧಿಗಳನ್ನು ಇರಿಸಲು ಸುರಕ್ಷಿತ ಸ್ಥಳದ ವ್ಯವಸ್ಥೆ ಮಾಡಲು ಬಾಲ ನ್ಯಾಯ ಕಾಯಿದೆ, 2015ರ ಕಲಂ 49(1)ರಲ್ಲಿ ತಿಳಿಸಲಾಗಿದೆ.

**11)ಮಕ್ಕಳ ಸಹಾಯವಾಣಿ 1098:**

ಇದು ರಾಷ್ಟ್ರ ವ್ಯಾಪ್ತಿಯಲ್ಲಿ ಚಾಲ್ತಿಯಲ್ಲಿರುವ ಮಕ್ಕಳ ಸಹಾಯವಾಣಿ. ಸಂಕಷ್ಟದಲ್ಲಿ ಸಿಲುಕಿರುವ / ರಕ್ಷಣೆ ಮತ್ತು ಪೋಷಣೆಗೆ ಅವಶ್ಯಕತೆ ಇರುವ ಮಕ್ಕಳಿಗೆ ತುರ್ತು ಸೇವೆಯನ್ನು ಒದಗಿಸಲು ಈ ಸಂಖ್ಯೆಗೆ ಕರೆ ಮಾಡುವ ಮೂಲಕ ನೆರವು ಪಡೆಯಬಹುದಾಗಿದೆ. ಈ ಸಂಖ್ಯೆಯು ಉಚಿತ ದೂರವಾಣಿಯಾಗಿದ್ದು ಮಕ್ಕಳಾಗಲಿ ಅಥವಾ ಸಾರ್ವಜನಿಕರಾಗಲಿ ಕರೆ ಮಾಡುವ ಮೂಲಕ ತುರ್ತು ನೆರವು ಅಗತ್ಯವಿರುವ ಮಕ್ಕಳಿಗೆ ರಕ್ಷಣೆಯನ್ನು ಒದಗಿಸಬಹುದಾಗಿದೆ.

12) **ಸ್ವಯಂ ಸೇವಾ ಸಂಸ್ಥೆಗಳಿಂದ ನಿರ್ವಹಿಸಲ್ಪಡುತ್ತಿರುವ ಮಕ್ಕಳ ಪಾಲನಾ ಕೇಂದ್ರ (NGO Run Homes/Fit facility):**

ಕೇಂದ್ರ ಸರ್ಕಾರದ ಪಿಎಬಿ (Programme Approval Board) ಅನುಮೋದನೆಯಂತೆ ಸ್ವಯಂ ಸೇವಾ ಸಂಸ್ಥೆಗಳಿಂದ ಮಕ್ಕಳ ಪಾಲನೆ ಮತ್ತು ರಕ್ಷಣೆಗಾಗಿ ಹಾಗೂ ದೀರ್ಘಾವಧಿ ಪುನರ್ವಸತಿಗಾಗಿ ಬಾಲನ್ಯಾಯ ಕಾಯ್ದೆ 2015 ಸೆಕ್ಷನ್ 50(1) ರನ್ವಯ ಕಾರ್ಯನಿರ್ವಹಿಸುತ್ತಿರುವ 5 ಸ್ವಯಂ ಸೇವಾ

ಸಂಸ್ಥೆಗಳಿಗೆ ಅನ್ನದಾನವನ್ನು ಕೇಂದ್ರ: ರಾಜ್ಯ: ಸ್ವಯಂ ಸೇವಾ ಸಂಸ್ಥೆ 60:30:10 ಅನುಪಾತದಲ್ಲಿ ವೆಚ್ಚವನ್ನು ಭರಿಸಲಾಗುತ್ತಿದೆ.

13)**ಉಚಿತ ಆಪ್ತ ಸಮಾಲೋಚನೆ 14499**:

ಸಮಗ್ರ ಮಕ್ಕಳ ರಕ್ಷಣಾ ಯೋಜನೆಯು ಯೂನಿಸೆಫ್ ಸಹಯೋಗದಲ್ಲಿ ಕರ್ನಾಟಕ ರಾಜ್ಯದ ಎಲ್ಲಾ ಮಕ್ಕಳಿಗಾಗಿ ದೂರವಾಣಿ ಆಪ್ತ-ಸಮಾಲೋಚನೆ ನೀಡಲು **"ಟೋಲ್-ಫ್ರೀ14499"** ಅನ್ನು ಸ್ಥಾಪಿಸಲಾಗಿದೆ. "ಟೆಲಿ-ಆಪ್ತಸಮಾಲೋಚನೆ"ಗೆ ಆಪ್ತ ಸಮಾಲೋಚನೆ ಬಯಸುವ ಕರ್ನಾಟಕದಲ್ಲಿನ ಎಲ್ಲಾ ಮಕ್ಕಳು ಹಾಗೂ ಮಕ್ಕಳಿಗಾಗಿ ಮಕ್ಕಳ ಪೋಷಕರು ಸಹ 14499 ಸಂಖ್ಯೆಗೆ ಕರೆ ಮಾಡುವ ಮೂಲಕ ಉಚಿತವಾಗಿ ಆಪ್ತ ಸಮಾಲೋಚನೆ ಸೌಲಭ್ಯ ಪಡೆಯಬಹುದು.

# ಅನುಬಂಧ-2

## ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ

### ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಕಾರ್ಯಕ್ರಮ/ಯೋಜನೆಗಳ ವಿವರ (ಕೇಂದ್ರ ಸರ್ಕಾರದ ಕಾರ್ಯಕ್ರಮಗಳು)

| ಕ್ರ. ಸಂ. | ಕಾರ್ಯಕ್ರಮ/ ಯೋಜನೆಗಳು | ಕೇಂದ್ರ/ ರಾಜ್ಯ | ಕಾರ್ಯಕ್ರಮಗಳ ವಿವರ |
|---|---|---|---|
| 1 | ಮಹಿಳಾ ಸಹಾಯವಾಣಿ-181 | (ಕೇಂದ್ರ:100 %) | ಮಹಿಳೆಯರಿಗೆ ಮಾಹಿತಿಯನ್ನು ನೀಡಲು ಹಾಗೂ ದೌರ್ಜನ್ಯ ಮತ್ತು ಸಂಕಷ್ಟದಲ್ಲಿರುವ ಮಹಿಳೆಯರಿಗೆ ತುರ್ತು ನೆರವನ್ನು ಒದಗಿಸುವ ನಿಟ್ಟಿನಲ್ಲಿ ಯೂನಿವರ್ಸಲೈಸೇಷನ್ ಆಫ್ ವುಮೆನ್ ಹೆಲ್ಪ್ ಲೈನ್ - 181 ಎಂಬ ಉಚಿತ ದೂರವಾಣಿ ಸೇವೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಈ ಸೇವೆಯನ್ನು ದಿನದ 24X7 ಗಂಟೆಗಳು ರಾಜ್ಯಾದ್ಯಂತ ಒದಗಿಸಲಾಗುತ್ತಿದೆ.<br>ವಿವಿಧ ರೀತಿಯ ದೌರ್ಜನ್ಯ/ಸಂಕಷ್ಟಕ್ಕೊಳಗಾದ ಮಹಿಳೆ, ಅತ್ಯಾಚಾರಕ್ಕೊಳಗಾದ ಮಹಿಳೆ, ಕೌಟುಂಬಿಕ ದೌರ್ಜನ್ಯಕ್ಕೊಳಗಾದ ಮಹಿಳೆ, ತಾತ್ಕಾಲಿಕ ಆಶ್ರಯ ಬಯಸುವ ಮಹಿಳೆ, ಹಾಗೂ ವರದಕ್ಷಿಣೆ ಕಿರುಕುಳಕ್ಕೊಳಪಟ್ಟ ಮಹಿಳೆಯರು 181 ಅನ್ನು ಸಂಪರ್ಕಿಸಬಹುದು. |
| 2 | ಉದ್ಯೋಗಿ ಮಾತೆಯರ ಮಕ್ಕಳಿಗಾಗಿ ಶಿಶುವಿಹಾರಗಳು | (ಕೇಂದ್ರ:ರಾಜ್ಯ: NGO-60:30:10) | ರಾಷ್ಟ್ರೀಯ ಶಿಶುಪಾಲನಾ ಕೇಂದ್ರ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು, ಸದರಿ ಯೋಜನೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲು ಕೇಂದ್ರ ಸರ್ಕಾರ, ರಾಜ್ಯ ಸರ್ಕಾರ ಹಾಗೂ ಸ್ವಯಂ ಸೇವಾ ಸಂಸ್ಥೆಗಳ ಪಾಲು ಅನುಕ್ರಮವಾಗಿ 60:30:10 ಅನುಪಾತದಂತೆ ಅನುದಾನವನ್ನು ಒದಗಿಸಲಾಗಿರುತ್ತದೆ. ನವೀಕೃತಗೊಂಡ ಈ ಯೋಜನೆಯು 6 ತಿಂಗಳಿಂದ 3 ವರ್ಷದ ಮಕ್ಕಳಿಗೆ ಪ್ರಾರಂಭಿಕ ಬಾಲ್ಯಾವಸ್ಥೆಯ ಸೇವೆಗಳನ್ನು ನೀಡುವಲ್ಲಿ ಮಹತ್ವಪೂರ್ಣ ಬದಲಾವಣೆಯನ್ನು ತರುವ ಉದ್ದೇಶ ಹೊಂದಿರುತ್ತದೆ. ಉದ್ಯೋಗಸ್ಥ ತಾಯಂದಿರು ತಮ್ಮ ಕೆಲಸದ ಅವಧಿಯಲ್ಲಿ ಮಕ್ಕಳ ಸಮಗ್ರ ಪೋಷಣೆಗಾಗಿ ಶಿಶು ಪಾಲನಾ ಕೇಂದ್ರದಲ್ಲಿ ತಮ್ಮ ಮಕ್ಕಳನ್ನು ಕಳುಹಿಸಲು ಅನುಕೂಲವಾಗುತ್ತದೆ. ಉದ್ದೇಶಗಳು: ತಾಯಂದಿರ 6ತಿಂಗಳಿಂದ 6ವರ್ಷದ ಮಕ್ಕಳನ್ನು ದಿನಪೂರ್ತಿ ಸುರಕ್ಷಿತವಾಗಿ ನೋಡಿಕೊಳ್ಳುವುದು. ಮಕ್ಕಳ ಪೌಷ್ಠಿಕ ಹಾಗೂ ಆರೋಗ್ಯಮಟ್ಟವನ್ನು ಸುಧಾರಿಸುವುದು. ಮಕ್ಕಳ ಭೌತಿಕ, ಸಾಮಾಜಿಕ, ಭಾವನಾತ್ಮಕ ಬೆಳವಣಿಗೆಯನ್ನು ಉತ್ತೇಜಿಸುವುದು. ಮಕ್ಕಳನ್ನು ಕಾಳಜಿಯಿಂದ ನೋಡಿಕೊಳ್ಳುವಂತೆ ತಾಯಂದಿರಿಗೆ ಹಾಗೂ ಪೋಷಕರಿಗೆ ಶಿಕ್ಷಣ ನೀಡುವುದು ಸೇವೆಗಳು: ದಿನದ ಆರೈಕೆ, ವಿಶ್ರಾಂತಿ ಸೌಲಭ್ಯ ಒಳಗೊಂಡಿರುತ್ತದೆ. 0-3 ವರ್ಷದ ಮಕ್ಕಳಿಗೆ ಪ್ರಾಥಮಿಕ ಉತ್ತೇಜನ ನೀಡುವುದು ಹಾಗೂ 3-6 ವರ್ಷದ ಮಕ್ಕಳಿಗೆ ಶಾಲಾಪೂರ್ವ ಶಿಕ್ಷಣ ನೀಡುವುದು. ಪೂರಕ ಪೌಷ್ಠಿಕ ಆಹಾರ. ಬೆಳವಣಿಗೆ ಪರಿಶೀಲನೆ. ಆರೋಗ್ಯ ತಪಾಸಣೆ ಮತ್ತು ಚುಚ್ಚುಮದ್ದು ನೀಡುವುದು. |
| 3 | ಉದ್ಯೋಗಸ್ಥ ಮಹಿಳೆಯರ ವಸತಿ ನಿಲಯಗಳು | (ಕೇಂದ್ರ:ರಾಜ್ಯ: NGO-65:10:25) | • ಉದ್ಯೋಗಸ್ಥ ಮಹಿಳೆಯರಿಗೆ ಸುರಕ್ಷಿತ ಹಾಗೂ ಯೋಗ್ಯ ವಸತಿ ಸೌಕರ್ಯ ಕಲ್ಪಿಸುವುದು ಯೋಜನೆಯ ಉದ್ದೇಶವಾಗಿದೆ. ಈ ಯೋಜನೆಯಡಿ ಮಹಿಳೆಯರು ಮತ್ತು ವಿದ್ಯಾರ್ಥಿನಿಯರು ವಸತಿ ಸೌಕರ್ಯವನ್ನು ಪಡೆಯುತ್ತಿದ್ದಾರೆ. ಕಟ್ಟಡದ ಒಟ್ಟು ಅಂದಾಜು ವೆಚ್ಚದಲ್ಲಿ 65% ಅನ್ನು ಭಾರತ ಸರ್ಕಾರವು ಒದಗಿಸುತ್ತದೆ ಮತ್ತು ಉಳಿದ 25% ಅನ್ನು NGO ಮತ್ತು 10% ರಾಜ್ಯ ಸರ್ಕಾರವು ಭರಿಸಬೇಕಾಗುತ್ತದೆ<br>• ರಾಜ್ಯದಲ್ಲಿ ಪ್ರಸ್ತುತ 65 ಹಾಸ್ಟೆಲ್ ಗಳು ಕಾರ್ಯನಿರ್ವಹಿಸುತ್ತಿವೆ. |
| 4 | ಸ್ವಾಧಾರ ಗೃಹ ಯೋಜನೆ | (ಕೇಂದ್ರ:ರಾಜ್ಯ-60:40%) | • ಸ್ವಾಧಾರ ಗೃಹ ಯೋಜನೆಯು ದೌರ್ಜನ್ಯಕ್ಕೊಳಗಾದ ಮಹಿಳೆಯರಿಗೆ ಅಗತ್ಯ ಸಮಾಲೋಚನೆ, ತಾತ್ಕಾಲಿಕ ಆಶ್ರಯವನ್ನು ಒದಗಿಸುವುದು.<br>• ಪುನರ್ವಸತಿಗಾಗಿ ಸಾಂಸ್ಥಿಕ ಬೆಂಬಲದ ಅಗತ್ಯವಿರುವ ಕಷ್ಟಕರ ಸಂದರ್ಭಗಳಲ್ಲಿ ಸಂತ್ರಸ್ತ ಮಹಿಳೆಯರಿಗೆ ವಸತಿ, ಆಹಾರ ಬಟ್ಟೆ ಮತ್ತು ಆರೋಗ್ಯದ ಜೊತೆಗೆ ಆರ್ಥಿಕ ಮತ್ತು ಸಾಮಾಜಿಕ ಭದ್ರತೆಯನ್ನು ಖಾತ್ರಿಪಡಿಸುತ್ತದೆ.<br>• ಪ್ರಸ್ತುತ 52 ಸ್ವಾಧಾರ ಗೃಹಗಳು ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿವೆ. |
| 5 | ಉಜ್ವಲ ಯೋಜನೆ | (ಕೇಂದ್ರ:ರಾಜ್ಯ-60:40%) | ಸಾಗಾಣಿಕೆಗೆ ಒಳಗಾದವರಿಗೆ ಮೂಲಭೂತ ಸೌಲಭ್ಯ, ಆಶ್ರಯ, ಆಹಾರ, ವಸ್ತ್ರ, ಸಮಾಲೋಚನೆ ಒಳಗೊಂಡಂತೆ ವೈದ್ಯಕೀಯ ಸೌಲಭ್ಯ, ಕಾನೂನಿನ ನೆರವುಮತ್ತು ಮಾರ್ಗದರ್ಶನ ಹಾಗೂ ವೃತ್ತಿ ತರಬೇತಿ ಸೇರಿದಂತೆ ತಕ್ಷಣ ಮತ್ತು ದೀರ್ಘಕಾಲಿಕ ಪುನರ್ವಸತಿ ಸೇವೆಯನ್ನು ಒದಗಿಸಲಾಗುವುದು. |
| 6 | ಪ್ರಧಾನ ಮಂತ್ರಿ ಮಾತೃ ವಂದನಾ ಯೋಜನೆ | (ಕೇಂದ್ರ:ರಾಜ್ಯ-60:40%) | 2011-12ನೇ ಸಾಲಿನಿಂದ ಅನುಷ್ಠಾನಗೊಳಿಸಲಾಗಿದ್ದು ಇಂದಿರಾಗಾಂಧಿ ಮಾತೃತ್ವ ಸಹಯೋಗ ಯೋಜನೆ (ಐಜಿಎಮ್ಎಸ್ವೈ) ಯನ್ನು 2017-18ನೇ ಸಾಲಿನಿಂದ ಪ್ರಧಾನ ಮಂತ್ರಿ ಮಾತೃವಂದನಾ ಯೋಜನೆ ಎಂಬ ಹೆಸರಿನಲ್ಲಿ ರಾಜ್ಯದ ಎಲ್ಲಾ ಜಿಲ್ಲೆಗಳಿಗೆ ವಿಸ್ತರಿಸಲಾಗಿದೆ. ಈ ಯೋಜನೆಯು 60:40 ಕೇಂದ್ರ:ರಾಜ್ಯ ಸರ್ಕಾರದ ಧನ ಸಹಾಯ ಯೋಜನೆಯಾಗಿದೆ. ಗರ್ಭಿಣಿ/ಬಾಣಂತಿಯರ ಆರೋಗ್ಯ ಮಟ್ಟವನ್ನು ಸುಧಾರಿಸುವ ನಿಟ್ಟಿನಲ್ಲಿ ಉತ್ತಮ ವಾತಾವರಣವನ್ನು ಸೃಷ್ಟಿಸಲು ನಗದು ರೂಪದಲ್ಲಿ ಪ್ರೋತ್ಸಾಹಧನ ನೀಡಲಾಗುವುದು. ಮೊದಲನೆ ಕಂತು ರೂ.1000/-ಗಳನ್ನು ಗರ್ಭಿಣಿಯಾಗಿ 3 ತಿಂಗಳಲ್ಲಿ, ಎರಡನೇ ಕಂತು ರೂ.2000/- ಗಳನ್ನು ಗರ್ಭಿಣಿಯಾಗಿ 6 ತಿಂಗಳು ಮತ್ತು ಒಂದು ಪ್ರಸವಪೂರ್ವ ಪರೀಕ್ಷೆ ನಂತರ ನೀಡಲಾಗುವುದು. ಮೂರನೇಯ ಕಂತು ರೂ.2000/- ಗಳನ್ನು ಮಗು ಮೊದಲನೇ ಹಂತದ ಚುಚ್ಚುಮದ್ದು ಪಡೆದ ನಂತರ ಒಟ್ಟು 3ಕಂತುಗಳಲ್ಲಿ ರೂ.5000/- ಗಳ ಹೆರಿಗೆ ಭತ್ಯೆಯನ್ನು ನೇರ ನಗದು ವರ್ಗಾವಣೆ ಮೂಲಕ ಫಲಾನುಭವಿಯ ಖಾತೆಗೆ ಜಮಾ ಮಾಡಲಾಗುವುದು. ಮೇಲ್ಕಂಡ ಫಲಾನುಭವಿಗಳು ಎನ್.ಆರ್.ಹೆಚ್ ಅಡಿ ಜನನಿ ಸುರಕ್ಷಾ ಯೋಜನೆಯ ಸೌಲಭ್ಯಕ್ಕೂ ಸಹ ಅರ್ಹರಾಗಿರುತ್ತಾರೆ. |

| | | | |
|---|---|---|---|
| 7 | ಸಖಿ-ಒನ್ ಸ್ಟಾಪ್ ಸೆಂಟರ್ ಯೋಜನೆ | (ಕೇಂದ್ರ-100%) | • ದೌರ್ಜನ್ಯಕ್ಕೊಳಗಾದ ಮಹಿಳೆಯರು ಮತ್ತು ಹೆಣ್ಣು ಮಕ್ಕಳಿಗೆ ಒಂದೇ ಸೂರಿನಡಿ ವೈದ್ಯಕೀಯ ಚಿಕಿತ್ಸೆ ಮತ್ತು ನೆರವು, ಪೊಲೀಸ್ ನೆರವು, ಕಾನೂನು ನೆರವು, ತಾತ್ಕಾಲಿಕ ಆಶ್ರಯ ಮತ್ತು ಸಮಾಲೋಚನೆ ಸೇವೆಗಳನ್ನು ಒದಗಿಸುವ ಉದ್ದೇಶದಿಂದ ಸಖಿ ಕೇಂದ್ರಗಳನ್ನು ಸ್ಥಾಪಿಸಲಾಗಿದೆ<br>• ಪ್ರಸ್ತುತ ರಾಜ್ಯದ 30 ಜಿಲ್ಲೆಗಳಲ್ಲಿಯೂ "ಸಖಿ-ಒನ್ ಸ್ಟಾಪ್ ಸೆಂಟರ್ ಗಳನ್ನು ಸ್ಥಾಪಿಸಲಾಗಿದ್ದು, ದಿನದ 24X7 ಗಂಟೆಗಳು ಕಾರ್ಯನಿರ್ವಹಿಸುತ್ತಿವೆ<br>• ಸದರಿ ಕೇಂದ್ರದಲ್ಲಿ ನೊಂದ ಮಹಿಳೆಯರಿಗೆ ತಾತ್ಕಾಲಿಕವಾಗಿ ಆಶ್ರಯ ನೀಡಲು ಹಾಸಿಗೆಗಳ ವ್ಯವಸ್ಥೆ, ವಿಡಿಯೋ ಕಾನ್ಫರೆನ್ಸ್ ಕೊಠಡಿ, ಸಮಾಲೋಚನಾ ಕೊಠಡಿ, ಕಾನೂನು ಸಲಹಾ ಕೊಠಡಿ ಮತ್ತು ವೈದ್ಯಕೀಯ ಕೊಠಡಿಗಳ ಸೌಲಭ್ಯವನ್ನು ಒದಗಿಸಲಾಗುತ್ತಿದೆ. |
| 8 | ಬೇಟಿ ಬಚಾವ್ಹೋ ಬೇಟಿ ಪಢಾವ್ಹೋ | (ಕೇಂದ್ರ-100%) | ಹೆಣ್ಣು ಮಕ್ಕಳ ಲಿಂಗಾನುಪಾತವನ್ನು ಉತ್ತಮಗೊಳಿಸಿ, ಹೆಣ್ಣುಮಕ್ಕಳಿಗೆ ಉತ್ತಮ ಶಿಕ್ಷಣವನ್ನು ನೀಡುವುದು ಉದ್ದೇಶವಾಗಿದ್ದು, ಈ ಯೋಜನೆಯಡಿ ಅರಿವು ಮೂಡಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುವುದು. (ಬೀದಿನಾಟಕ, ಜಾಥಾ, ಹೆಣ್ಣುಮಕ್ಕಳ ದಿನಾಚರಣೆ ಮುಂತಾದವು) |

**ಮಕ್ಕಳ ರಕ್ಷಣಾ ನಿರ್ದೇಶನಾಲಯ**

ಮಿಷನ್ ವಾತ್ಸಲ್ಯ ಯೋಜನೆಯಡಿ ಅನುಷ್ಠಾನಗೊಳಿಸಲಾಗುತ್ತಿರುವ ಎಲ್ಲಾ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಕೇಂದ್ರ ಮತ್ತು ರಾಜ್ಯ ಸರ್ಕಾರದ ಕ್ರಮವಾಗಿ 60:40 ಅನುಪಾತದಲ್ಲಿ ಅನುದಾನ ಬಿಡುಗಡೆ ಮಾಡಲಾಗುತ್ತಿದೆ."PM CARES for Children" ಯೋಜನೆಯು ಸಂಪೂರ್ಣವಾಗಿ ಕೇಂದ್ರ ಸರ್ಕಾರದ ಅನುದಾನದಿಂದ ನಿರ್ವಹಿಸಲಾಗುತ್ತಿದೆ.

ದಿನಾಂಕ: 11.03.2020 ರ ನಂತರದಲ್ಲಿ ಕೋವಿಡ್-19 ರಿಂದ ಪೋಷಕರಿಬ್ಬರನ್ನು ಕಳೆದುಕೊಂಡಂತಹ ಎಲ್ಲಾ ಮಕ್ಕಳಿಗೆ ಕೇಂದ್ರ ಸರ್ಕಾರದ"PM CARES for Children" ಯೋಜನೆಯನ್ನು ಕರ್ನಾಟಕ ರಾಜ್ಯದಲ್ಲಿಯೂ ಅನುಷ್ಠಾನಗೊಳಿಸಲಾಗುತ್ತಿದೆ. ಸದರಿ ಯೋಜನೆಯ ಸೌಲಭ್ಯವನ್ನು ಫಲಾನುಭವಿಗಳಿಗೆ ಒದಗಿಸಲು ಅಂಚೆ ಕಛೇರಿಯಲ್ಲಿ ಖಾತೆಯನ್ನು ತೆರೆಯಲು ಕ್ರಮವಹಿಸಲಾಗಿದೆ.

## ಅನುಬಂಧ-3

## ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ

### ಕಳೆದ 3 ವರ್ಷಗಳಲ್ಲಿ ಇಲಾಖಾ ಕಾರ್ಯಕ್ರಮಗಳಿಗಾಗಿ ಒದಗಿಸಲಾದ ಅನುದಾನ ಮತ್ತು ಪ್ರಯೋಜನ ಪಡೆದ ಫಲಾನುಭವಿಗಳ ವಿವರ

| ಕ್ರ. ಸಂ. | ಕಾರ್ಯಕ್ರಮ/ ಯೋಜನೆಗಳು | ಕೇಂದ್ರ/ ರಾಜ್ಯ | ಒದಗಿಸಲಾದ ಅನುದಾನ (ರೂ.ಲಕ್ಷಗಳಲ್ಲಿ) | | | ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಒಟ್ಟು ಕೇಂದ್ರಗಳು | ಪ್ರಯೋಜನ ಪಡೆದ ಫಲಾನುಭವಿಗಳು | | |
|---|---|---|---|---|---|---|---|---|---|
| | | | 2019-20 | 2020-21 | 2021-22 | | 2019-20 | 2020-21 | 2021-22 |
| 1 | ಅಂಗನವಾಡಿ ಕಟ್ಟಡಗಳ ನಿರ್ಮಾಣ (ಆರ್ಐಡಿಎಫ್-ನಬಾರ್ಡ್) | (ನಬಾರ್ಡ್: ರಾಜ್ಯ-85:15%) | **0.00** | **5000.00** | **4479.00** | **6** | **0** | 306 | 271 |
| 2 | ಅಂಗನವಾಡಿ ಕಟ್ಟಡಗಳ ನಿರ್ಮಾಣ (ಐ.ಸಿ.ಡಿ.ಎಸ್. -ನರೇಗ) | (ನರೇಗ:ರಾಜ್ಯ-50:50%) | **375.00** | **500.00** | **500.00** | **100** | **74** | **100** | **100** |
| 3 | ಸಾಂತ್ವನ ಯೋಜನೆ | (ರಾಜ್ಯ-100%) | **1287.20** | **1200.00** | **816.00** | **178** | **66401** ಮಹಿಳೆಯರು ಸಮಾಲೋಚನೆ ಸೇವೆ ಪಡೆದಿರುತ್ತಾರೆ | **22946** ಮಹಿಳೆಯರು ಸಮಾಲೋಚನೆ ಸೇವೆ ಪಡೆದಿರುತ್ತಾರೆ | **17208** ಮಹಿಳೆಯರು ಸಮಾಲೋಚನೆ ಸೇವೆ ಪಡೆದಿರುತ್ತಾರೆ |
| 4 | ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ | (ರಾಜ್ಯ-100%) | **35.00** | **35.00** | **36.00** | **26 ಪ್ರಶಸ್ತಿಗಳು** | **26 ಪ್ರಶಸ್ತಿಗಳು** | **25 ಪ್ರಶಸ್ತಿಗಳು** | **26 ಪ್ರಶಸ್ತಿಗಳು** |
| 5 | ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆ 2005 ನಿಯಮ 2006 | (ರಾಜ್ಯ-100%) | **723.00** | **706.00** | **688.00** | **234** | **3536** ಪ್ರಕರಣಗಳು ದಾಖಲಾಗಿದ್ದು, ಇತ್ಯರ್ಥಗೊಳಿಸಲು ಕ್ರಮವಹಿಸಲಾಗಿದೆ | **6354** ಪ್ರಕರಣಗಳು ದಾಖಲಾಗಿದ್ದು, ಇತ್ಯರ್ಥಗೊಳಿಸಲು ಕ್ರಮವಹಿಸಲಾಗಿದೆ | **4053** ಪ್ರಕರಣಗಳು ದಾಖಲಾಗಿದ್ದು, ಇತ್ಯರ್ಥಗೊಳಿಸಲು ಕ್ರಮವಹಿಸಲಾಗಿದೆ |
| 6 | ಭಾಗ್ಯಲಕ್ಷ್ಮಿ ಯೋಜನೆ | (ರಾಜ್ಯ-100%) | **29442.00** | **6800.00** | **11080.00** | **'-** | **150569** | **156056** | **298724** |
| 7 | ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ತಡೆಗಟ್ಟುವಿಕೆ | (ರಾಜ್ಯ-100%) | **30.00** | **30.00** | **30.00** | **'-** | **91960** | **25000** | ಅರಿವು ಮೂಡಿಸುವ ಕಾರ್ಯಕ್ರಮ |

| | | | | | | | | | |
|---|---|---|---|---|---|---|---|---|---|
| 8 | ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಶೌರ್ಯ ಪ್ರಶಸ್ತಿ | (ರಾಜ್ಯ-100%) | 30.00 | 30.00 | 30.00 | '- | 245 | 226 | 226 |
| 9 | ಮಕ್ಕಳ ದಿನಾಚರಣೆ | (ರಾಜ್ಯ-100%) | 15.00 | 15.00 | 5.00 | 8 ಪ್ರಶಸ್ತಿಗಳು | 8 ಪ್ರಶಸ್ತಿಗಳು | 8 ಪ್ರಶಸ್ತಿಗಳು | 8 ಪ್ರಶಸ್ತಿಗಳು |
| 10 | ಜಿಲ್ಲಾ ಶಿಶುಪಾಲನಾ ಕೇಂದ್ರಗಳು | (ರಾಜ್ಯ-100%) | 0.00 | 0.00 | 23.25 | 30 ಕೇಂದ್ರಗಳು | | | |
| 11 | ಸ್ತ್ರೀಶಕ್ತಿ ಯೋಜನೆ | (ರಾಜ್ಯ-100%) | 1079.00 | 507.00 | 8523.04 | '- | 7500 ಸ್ತ್ರೀಶಕ್ತಿ ಗುಂಪುಗಳು | 12177 ಸ್ತ್ರೀಶಕ್ತಿ ಗುಂಪುಗಳು | 8392 ಸ್ತ್ರೀಶಕ್ತಿ ಗುಂಪುಗಳು |
| 12 | ಬಾಲ್ಯ ವಿವಾಹ ನಿಷೇಧ ಕೋಶ | (ರಾಜ್ಯ-100%) | 150.00 | 175.00 | 100.00 | '- | ಅರಿವು ಮೂಡಿಸುವ ಕಾರ್ಯಕ್ರಮ | ಅರಿವು ಮೂಡಿಸುವ ಕಾರ್ಯಕ್ರಮ | ಅರಿವು ಮೂಡಿಸುವ ಕಾರ್ಯಕ್ರಮ |
| 13 | ಸ್ವೀಕಾರ ಕೇಂದ್ರ ಹಾಗೂ ರಾಜ್ಯ ಮಹಿಳಾ ನಿಲಯ | (ರಾಜ್ಯ-100%) | 758.50 | 778.82 | 835.52 | 12 | 933 ಮಹಿಳೆಯರು ಸೌಲಭ್ಯ ಪಡೆದಿರುತ್ತಾರೆ | 978ಮಹಿಳೆಯರು ಸೌಲಭ್ಯ ಪಡೆದಿರುತ್ತಾರೆ | 979ಮಹಿಳೆಯರು ಸೌಲಭ್ಯ ಪಡೆದಿರುತ್ತಾರೆ |
| 14 | ಬಾಲಕಿಯರ ವಸತಿ ನಿಲಯ | (ರಾಜ್ಯ-100%) | 509.45 | 257.20 | 495.00 | 37 ಬಾ.ವ.ನಿ ಗಳು | 2475 ವಿದ್ಯಾರ್ಥಿನಿಯರಿಗೆ ಉಚಿತ ವಸತಿ ಮತ್ತು ಭೋಜನ ಸೌಲಭ್ಯಗಳನ್ನು ಒದಗಿಸಲಾಗಿದೆ | 2038 ವಿದ್ಯಾರ್ಥಿನಿಯರಿಗೆ ಉಚಿತ ವಸತಿ ಮತ್ತು ಭೋಜನ ಸೌಲಭ್ಯಗಳನ್ನು ಒದಗಿಸಲಾಗಿದೆ | 2275 ವಿದ್ಯಾರ್ಥಿನಿಯರಿಗೆ ಉಚಿತ ವಸತಿ ಮತ್ತು ಭೋಜನ ಸೌಲಭ್ಯಗಳನ್ನು ಒದಗಿಸಲಾಗಿದೆ |
| 15 | ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರಿಗೆ ತರಬೇತಿ | (ರಾಜ್ಯ-100%) | 465.39 | 299.17 | 301.00 | 925 | 680 | 0 | 0 |
| 16 | ಪೋಷಣ ಅಭಿಯಾನ (ರಾಷ್ಟ್ರೀಯ ಪೌಷ್ಠಿಕಾಂಶ ಅಭಿಯಾನ) | (ರಾಜ್ಯ-100%) | 12972.15 | 6396.45 | 991.31 | - | - | - | 0 |
| 17 | ಪ್ರಾಯಪೂರ್ವ ಬಾಲಕಿಯರ ಸಬಲೀಕರಣ ರಾಜೀವ್ ಗಾಂಧಿ ಯೋಜನೆ (ಸಬಲ) | (ರಾಜ್ಯ-100%) | 200.00 | 40.62 | 0.00 | 73181 | 15566 | 6470 | 0 |

| | | | | | | | | | |
|---|---|---|---|---|---|---|---|---|---|
| 18 | ಸಮಗ್ರ ಶಿಶು ಅಭಿವೃದ್ಧಿ ಯೋಜನೆ (ಜಿಲ್ಲಾ ಘಟಕ) | (ರಾಜ್ಯ-100%) | 1462.95 | 1329.02 | 1174.57 | 251 | 166 | 166 | 157 |
| 19 | ಸಮಗ್ರ ಶಿಶು ಅಭಿವೃದ್ಧಿ ಯೋಜನೆ | (ರಾಜ್ಯ-100%) | 160444.66 | 162224.07 | 162004.81 | 132480 | 126773 | 126773 | 125843 |
| 20 | ಶಾಲಾ ಪೂರ್ವ ಮಕ್ಕಳ ಊಟದ ಯೋಜನೆ<br>ಪೂರಕ ಪೌಷ್ಠಿಕ ಆಹಾರ (ಕೇಂದ್ರ ಪುರಸ್ಕೃತ)<br>ರಾಜ್ಯ ಸರ್ಕಾರದ ಕಾರ್ಯಕ್ರಮಗಳು:-<br>ಸೃಷ್ಠಿ ಯೋಜನೆ, ಕ್ಷೀರಭಾಗ್ಯ ಯೋಜನೆ ಮತ್ತು ಮಾತೃ ಪೂರ್ಣ ಯೋಜನೆ. | (ರಾಜ್ಯ-100%) | 191025.14 | 195276.20 | 195285.30 | 5061654 | 4279858 | 4821572 | 4900275 |
| 21 | ಸಮಗ್ರ ಶಿಶು ಅಭಿವೃದ್ಧಿ ಯೋಜನೆ | (ರಾಜ್ಯ-100%) | 321.67 | 260.50 | 273.00 | 30 | 19 | 19 | 26 |
| 22 | ಅಪೌಷ್ಠಿಕ ಮಕ್ಕಳ ವೈದ್ಯಕೀಯ ವೆಚ್ಚಗಳನ್ನು ಭರಿಸುವ ಬಗ್ಗೆ (ಬಾಲಸಂಜೀವಿನಿ) | (ರಾಜ್ಯ-100%) | 200.00 | 200.00 | 0.00 | 10000 | 9506 | 7442 | 0 |
| 23 | ಅಂಗನವಾಡಿಗಳ ನಿರ್ವಹಣೆ | (ರಾಜ್ಯ-100%) | 2471.00 | 1979.00 | 4250.00 | 78116 | 78116 | 982 | 3250 |
| 24 | ನಗರ ಅಂಗನವಾಡಿಗಳ ಮೇಲ್ದರ್ಜೆಕರಣ | (ರಾಜ್ಯ-100%) | 225.00 | 300.00 | 307.89 | 150 | 31 | 450 | 450 |
| 25 | ಮಾತೃಶ್ರೀ ಯೋಜನೆ | (ರಾಜ್ಯ-100%) | 23500.00 | 0.00 | 0.00 | 524777 | 0 | 0 | 0 |
| 26 | ಅಂಗನವಾಡಿ ರ್ಯಕರ್ತೆ/ ಸಹಾಯಕಿಯರ ಮರಣ ಪರಿಹಾರ ನಿಧಿ ಇಡಿಗಂಟು ಯೋಜನೆ | (ರಾಜ್ಯ-100%) | 100.00 | 100.00 | 75.00 | 200 | 362 | 199 | 153 |

| | | | | | | | | |
|---|---|---|---|---|---|---|---|---|
| 27 | ಅಂಗನವಾಡಿ ಕಾರ್ಯಕರ್ತೆಯರಿಗೆ ನೂತನ ಪಿಂಚಣಿ ವ್ಯವಸ್ಥೆ | (ರಾಜ್ಯ-100%) | **1000.00** | **1000.00** | **1000.00** | **71706** | **71706** | **71706** | **65656** |
| 28 | ಅಂಗನವಾಡಿ ಕಟ್ಟಡಗಳು ವಿಶೇಷ ಅಭಿವೃದ್ಧಿ ಯೋಜನೆ | (ರಾಜ್ಯ-100%) | **3597.50** | **10765.00** | **2000.00** | **256** | **207** | **910** | **400** |
| 29 | ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪ ಯೋಜನೆ | (ರಾಜ್ಯ-100%) | **0.00** | **332.00** | **45.33** | **0** | **0** | **19** | **9** |
| 30 | ಅಂಗನವಾಡಿ ಕಟ್ಟಡ ನಿರ್ವಹಣೆ ಮತ್ತು ದುರಸ್ತಿ | (ರಾಜ್ಯ-100%) | **2465.00** | **2500.00** | **2500.00** | **4952** | **4843** | **5000** | **5000** |
| 31 | ಅಂಗನವಾಡಿ ಕಟ್ಟಡಗಳ ಉನ್ನತೀಕರಣ | (ರಾಜ್ಯ-100%) | **1749.40** | **0.00** | **0.00** | **4785** | **4581** | **0** | **0** |
| | **ಕೇಂದ್ರ ಸರ್ಕಾರದ ಕಾರ್ಯಕ್ರಮ/ಯೋಜನೆಗಳು** | | | | | | | | |
| 1 | ಮಹಿಳಾ ಸಹಾಯವಾಣಿ-181 | (ಕೇಂದ್ರ:100%) | **63.00** | **0.00** | **0.00** | **1** | **6159** ಕರೆಗಳನ್ನು ಸ್ವೀಕರಿಸಲಾಗಿದ್ದು, ಸೂಕ್ತ ಸೇವೆಯನ್ನು ಒದಗಿಸಲಾಗಿದೆ. | **8557** ಕರೆಗಳನ್ನು ಸ್ವೀಕರಿಸಲಾಗಿದ್ದು, ಸೂಕ್ತ ಸೇವೆಯನ್ನು ಒದಗಿಸಲಾಗಿದೆ. | **10790** ಕರೆಗಳನ್ನು ಸ್ವೀಕರಿಸಲಾಗಿದ್ದು, ಸೂಕ್ತ ಸೇವೆಯನ್ನು ಒದಗಿಸಲಾಗಿದೆ. |
| 2 | ಉದ್ಯೋಗಿ ಮಾತೆಯರ ಮಕ್ಕಳಿಗಾಗಿ ಶಿಶುವಿಹಾರಗಳು | (ಕೇಂದ್ರ:ರಾಜ್ಯ: NGO-60:30:10) | **1105.98** | **636.00** | **426.65** | **544** | **544** | **544** | **544** |
| 3 | ಉದ್ಯೋಗಸ್ಥ ಮಹಿಳೆಯರ ವಸತಿ ನಿಲಯಗಳು | (ಕೇಂದ್ರ:ರಾಜ್ಯ: NGO-65:10:25) | **0.00** | **0.00** | **52.50** | **65** | **4490** ಮಹಿಳೆಯರು ವಸತಿ ಆಶ್ರಯ ಪಡೆದಿರುತ್ತಾರೆ | **1955** ಮಹಿಳೆಯರು ವಸತಿ ಆಶ್ರಯ ಪಡೆದಿರುತ್ತಾರೆ | **2172** ಮಹಿಳೆಯರು ವಸತಿ ಆಶ್ರಯ ಪಡೆದಿರುತ್ತಾರೆ |
| 4 | ಸ್ವಾಧಾರ ಗೃಹ ಯೋಜನೆ | (ಕೇಂದ್ರ:ರಾಜ್ಯ-60:40%) | **694.12** | **454.75** | **721.19** | **52** | **2889** ಮಹಿಳೆಯರು ಮತ್ತು ಮಕ್ಕಳು ಆಶ್ರಯ ಸೇವೆ ಕಲ್ಪಿಸಲಾಗಿದೆ | **2310** ಮಹಿಳೆಯರು ಮತ್ತು ಮಕ್ಕಳು ಆಶ್ರಯ ಸೇವೆ ಕಲ್ಪಿಸಲಾಗಿದೆ | **1709** ಮಹಿಳೆಯರು ಮತ್ತು ಮಕ್ಕಳು ಆಶ್ರಯ ಸೇವೆ ಕಲ್ಪಿಸಲಾಗಿದೆ |

| | | | | | | | | | |
|---|---|---|---|---|---|---|---|---|---|
| 5 | ಉಜ್ವಲ ಯೋಜನೆ | (ಕೇಂದ್ರ:ರಾಜ್ಯ-60:40%) | **100.00** | **205.00** | **250.40** | **15** | **425** ನಿವಾಸಿಗಳು | **463** ನಿವಾಸಿಗಳು | **425** ನಿವಾಸಿಗಳು |
| 6 | ಪ್ರಧಾನ ಮಂತ್ರಿ ಮಾತೃ ವಂದನಾ ಯೋಜನೆ | (ಕೇಂದ್ರ:ರಾಜ್ಯ-60:40%) | **14849.19** | **14277.61** | **19371.07** | **19800** | **335400** | **456184** | **398750** |
| 7 | ಸಖಿ-ಒನ್ ಸ್ಟಾಪ್ ಸೆಂಟರ್ ಯೋಜನೆ | (ಕೇಂದ್ರ-100%) | **582.54** | **729.08** | **513.89** | **30** | **2089** ಮಹಿಳೆಯರಿಗೆ ಅಗತ್ಯ ಸೇವೆ ಒದಗಿಸಲಾಗಿದೆ | **2810** ಮಹಿಳೆಯರಿಗೆ ಅಗತ್ಯ ಸೇವೆ ಒದಗಿಸಲಾಗಿದೆ | **6363** ಮಹಿಳೆಯರಿಗೆ ಅಗತ್ಯ ಸೇವೆ ಒದಗಿಸಲಾಗಿದೆ |
| 8 | ಬೇಟಿ ಬಚಾವೋ ಬೇಟಿ ಪಢಾವೋ | (ಕೇಂದ್ರ-100%) | **125.00** | **125.00** | **120.00** | '- | ಅರಿವು ಮೂಡಿಸುವ ಕಾರ್ಯಕ್ರಮ | ಅರಿವು ಮೂಡಿಸುವ ಕಾರ್ಯಕ್ರಮ | ಅರಿವು ಮೂಡಿಸುವ ಕಾರ್ಯಕ್ರಮ |

## ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ

ಕಳೆದ ಮೂರು ವರ್ಷಗಳಲ್ಲಿ ರಾಜ್ಯ ಸರ್ಕಾರ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮಕ್ಕೆ ರೂಪಿಸಿರುವ ಕಾರ್ಯಕ್ರಮಗಳ ವರ್ಷವಾರು ಒದಗಿಸಲಾದ ಅನುದಾನ ಮತ್ತು ಅನುಕೂಲಪಡೆದ ಫಲಾನುಭವಿಗಳ ವಿವರ

(ರೂ.ಲಕ್ಷಗಳಲ್ಲಿ)

| ಕ್ರ. ಸಂ | ಕಾರ್ಯಕ್ರಮಗಳ ಹೆಸರು | ವರ್ಷ | | | | | |
|---|---|---|---|---|---|---|---|
| | | 2019-20 | | 2020-21 | | 2021-22 | |
| | | ಒದಗಿಸಲಾದ ಅನುದಾನ | ಅನುಕೂಲ ಪಡೆದ ಫಲಾನುಭವಿಗಳ ಸಂಖ್ಯೆ | ಒದಗಿಸಲಾದ ಅನುದಾನ | ಅನುಕೂಲ ಪಡೆದ ಫಲಾನುಭವಿಗಳ ಸಂಖ್ಯೆ | ಒದಗಿಸಲಾದ ಅನುದಾನ | ಅನುಕೂಲ ಪಡೆದ ಫಲಾನುಭವಿಗಳ ಸಂಖ್ಯೆ |
| 1 | ಉದ್ಯೋಗಿನಿ | 2530.00 | 4557 | 2000.00 | 1812 | 1500.00 | 1479 |
| 2 | ಕಿರುಸಾಲ | 500.00 | 208 | 2500.00 | 206 | 300.00 | 56 |
| 3 | ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ | 410.00 | 637 | 300.00 | 431 | 300.00 | 805 |
| 4 | ಚೇತನ | 205.00 | 308 | 400.00 | 333 | 200.00 | 562 |
| 5 | ಮಾಜಿ ದೇವದಾಸಿ ಪುನರ್ವಸತಿ | 830.00 | 584 | 614.00 | 743 | 335.00 | 338 |
| 6 | ಧನಶ್ರೀ | 500.00 | 879 | 200.00 | 361 | 200.00 | 582 |
| 7 | ಮಾಜಿ ದೇವದಾಸಿಯರ ಮಾಸಾಶನ | 4772.00 | 30130 | 5423.10 | 30130 | 5436.00 | 26966 |
| 8 | ಮಾಜಿ ದೇವದಾಸಿಯರ ವಸತಿ | 1417.00 | 796 | 0.00 | 0 | 0.00 | 0 |
| 9 | KSFC ಮುಖಾಂತರ ಬಡ್ಡಿ ಸಹಾಯಧನ | 1000.00 | 300 | 5000.00 | 1175 | 5800.00 | 1389 |
| 10 | ಮಹಿಳಾ ತರಬೇತಿ | 350.00 | 2333 | 100.00 | 0 | 50.00 | 0 |
| 11 | ಸಮೃದ್ಧಿ | 300.00 | 2500 | 0.00 | 0 | 0.00 | 0 |
| 12 | ರಾಜ್ಯ ಸಂಪನ್ಮೂಲ ಕೇಂದ್ರ (ಗುತ್ತಿಗೆ/ಹೊರ ಗುತ್ತಿಗೆ) | 29.00 | 53 | 383.00 | 53 | 0.00 | 0 |
| 13 | ಇಂದಿರಾ | 301.00 | 38 | 151.00 | 9 | 2.00 | 4 |
| | **ಒಟ್ಟು** | **13144.00** | **43323** | **17071.10** | **35253** | **14123.00** | **32181** |

# ಮಕ್ಕಳ ರಕ್ಷಣಾ ನಿರ್ದೇಶನಾಲಯ

| ಕ್ರ ಸಂ | ಯೋಜನೆಗಳ ವಿವರ | 2019-20 | | | 2020-21 | | | 2021-22 | | |
|---|---|---|---|---|---|---|---|---|---|---|
| | | ಫಲಾನುಭವಿಗಳ ಸಂಖ್ಯೆ | ಮಂಜೂರಾದ ಅನುದಾನ | ಖರ್ಚು | ಫಲಾನುಭವಿಗಳ ಸಂಖ್ಯೆ | ಮಂಜೂರಾದ ಅನುದಾನ | ಖರ್ಚು | ಫಲಾನುಭವಿಗಳ ಸಂಖ್ಯೆ | ಮಂಜೂರಾದ ಅನುದಾನ | ಖರ್ಚು |
| 1 | ಪ್ರಾಯೋಜಕತ್ವ ಕಾರ್ಯಕ್ರಮ | 2631 | 3,00,00,000 | 2,41,15,677 | 3319 | 3,00,00,000 | 3,27,31,004 | 3682 | 3,00,00,000 | 3,09,38,000 (ಜಿಲ್ಲೆಯಲ್ಲಿ ಖರ್ಚಾಗದೇ ಉಳಿಕೆಯಾದ ಮೊತ್ತವನ್ನು ಉಪಯೋಗಿಸಿ ಕೊಳ್ಳಲಾಗಿದೆ) |
| 2 | ವಿಶೇಷ ಪಾಲನಾ ಯೋಜನೆ | 17884 | 15,00,00,000 | 15,29,53,830 | 16749 | 15,00,00,000 | 18,55,83,698 | 11680 | 20,00,00,000 | 13,98,24,000 |
| 3 | ವಿಶೇಷ ದತ್ತು ಸಂಸ್ಥೆಗಳು | 441 | 3,12,39,240 | 3,12,39,240 | 320 | 2,25,39,312 | 2,25,39,312 | 379 | 2,00,07,473 | 2,00,07,473 |
| 4 | ಮಕ್ಕಳ ಪಾಲನಾ ಸಂಸ್ಥೆಗಳು | 2360 | 34,24,56,000 | 34,24,56,000 | 1721 | 30,86,21,125 | 30,86,21,125 | 2033 | 36,61,16,014 | 36,61,16,014 |
| 5 | ತೆರೆದ ತಂಗುದಾಣ | 893 | 6,19,19,544 | 6,19,19,544 | 286 | 5,24,57,121 | 5,24,57,121 | 321 | 3,55,74,984 | 3,55,74,984 |